MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 336 | ಗುರುವಾರ : 30-10-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 336 | THURSDAY : 30-10-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಶ್ರೀ ಭಕ್ತ ಕನಕದಾಸ ಜಯಂತಿ ಆಚರಣೆ ಸಿದ್ಧತೆಗೆ ಸೂಚನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.29–** ಜಿಲ್ಲಾಡಳಿತದ ವತಿಯಿಂದ ಜಿಲ್ಲಾ ಮಟ್ಟದಲ್ಲಿ ನವೆಂಬರ್ 8 ರಂದು ನಡೆಯಲಿರುವ ಶ್ರೀ ಭಕ್ತ ಕನಕದಾಸರ ಜಯಂತಿ ಆಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಅವರು ಅಕ್ಟೋಬರ್ 29ರ ಬುಧವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಭಕ್ತ ಕನಕದಾಸರ ಜಯಂತಿಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ನಗರದ ರಂಗಮಂದಿರದವರೆಗೆ ಕನಕದಾಸರ ಭಾವಚಿತ್ರ ರಥಯಾತ್ರೆ ಮೆರವಣಿಗೆ ಹೊರಡಲಿದ್ದು, ಪ್ರಮುಖ ಮಾರ್ಗದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು. ಎಲ್ಲಾ ವೃತ್ತಗಳಲ್ಲಿ ದೀಪಾಲಂಕಾರ ಮಾಡಬೇಕು.

ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಜರುಗಲಿದ್ದು ರಂಗಮಂದಿರದ ಸುತ್ತಲಿನ ಎಲ್ಲಾ ರಸ್ತೆಗಳಲ್ಲಿ ಮತ್ತು ಆವರಣದಲ್ಲಿ ಸ್ವಚ್ಚತೆ ಕಾಯ್ದುಕೊಳ್ಳಬೇಕು. ಕಾರ್ಯಕ್ರಮಕ್ಕೆ ಆಗಮಿಸಲಿರುವ ಸಾರ್ವಜನಿಕರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಸೌಕರ್ಯ ಕಲ್ಪಿಸಬೇಕು. ಮೆರವಣಿಗೆ ಮಾರ್ಗದಲ್ಲಿ ಪೊಲೀಸ್ ಭದ್ರತಾ ವ್ಯವಸ್ಥೆಯಾಗಬೇಕು ಎಂದು ಸೂಚನೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ, ಕಲಾವಿದರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮದ ಬಗ್ಗೆ ಚರ್ಚಿಸಲಾಯಿತು.

ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳು, ಹಾಸ್ಟೆಲ್‌ಗಳಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಕನಕದಾಸ ಜಯಂತಿ ಆಚರಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಸೂಚನೆ (2ನೇಪುಟಕ್ಕೆ)

## ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನ ಅಚ್ಚುಕಟ್ಟಾಗಿ ನಡೆಯಲಿ: ಈಶ್ವರ ಕಾಂದೂ ಸೂಚನೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.29–** ಸ್ಪರ್ಶಜ್ಞಾನವಿಲ್ಲದ ತಿಳಿಬಿಳಿ ತಾಮ್ರವರ್ಣದ ಮಚ್ಚೆಗಳು ದೇಹದ ಮೇಲೆ ಕಂಡುಬಂದಲ್ಲಿ ನಿರ್ಲಕ್ಷಿಸದೆ ಕೂಡಲೇ ವೈದ್ಯರ ಬಳಿ ಖಚಿತ ಪಡಿಸಿಕೊಳ್ಳಬೇಕು. ಈ ಬಗ್ಗೆ ಸಾರ್ವಜನಿಕರು ಹೆದರಬಾರದು. ಇದು ಸಂಪೂರ್ಣ ಗುಣಪಡಿಸಬಹುದಾಗಿದ್ದು, ಇದಕ್ಕಾಗಿ ಸರಕಾರದಿಂದ ಉಚಿತ ಚಿಕಿತ್ಸೆ ನೀಡಲಾಗುತ್ತದೆ. ಈ ಬಗ್ಗೆ ಜನತೆಗೆ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ, ನವೆಂಬರ 03 ರಿಂದ 19ರವರೆಗೆ ಜಿಲ್ಲೆಯಾದ್ಯಂತ ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನ ಕುರಿತು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಹಯೋಗದಲ್ಲಿ ಇತ್ತೀಚೆಗೆ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೈಕ್ರೋ ಬ್ಯಾಕ್ಟೀರಿಯಂ ಲೇಪ್ರೆ ಎಂಬ ಸೂಕ್ಷ್ಮಾಣುವಿನಿಂದ ಬರುವ ಚರ್ಮ ಮತ್ತು ನರದ ಖಾಯಿಲೆಯಾಗಿದೆ. ವ್ಯಕ್ತಿಯ ದೇಹದ ಮೇಲೆ ದಪ್ಪನಾದ ಅಥವಾ ಹೊಳೆಯುವ ಎಣ್ಣೆಯುಕ್ತ ಚರ್ಮ, ಗಂಟುಗಳು, ಕಣ್ಣಿನ ರೆಪ್ಪೆ ಮುಚ್ಚಲು ಸಾಧ್ಯವಾಗದಿರುವುದು, ಕೈ ಅಥವಾ ಕಾಲುಗಳಲ್ಲಿ ವಾಸಿಯಾಗದ ಹುಣ್ಣು, ಬೆರಳುಗಳು ಮಡಿಚಿಕೊಂಡಿರುವುದು, ನಡೆಯುವಾಗ ಕಾಲು ಎಳೆಯುವುದು, ಕೈ ಅಥವಾ ಕಾಲುಗಳಲ್ಲಿ ಜುಮ್ಮೆನಿಸುವುದು ಅಥವಾ ಮರಗಟ್ಟುವಿಕೆ ಮುಂತಾದವುಗಳು ಕುಷ್ಠರೋಗದ ಲಕ್ಷಣಗಳಾಗಿದ್ದು, ರೋಗದ ತೀವ್ರತೆಯಾಧರಿಸಿ 6 ತಿಂಗಳು ಅಥವಾ 01 ವರ್ಷ ಅವಧಿಯ ಚಿಕಿತ್ಸೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿದೆ ಎಂಬುದನ್ನು ಸಾರ್ವಜನಿಕರಿಗೆ ಮನವರಿಕೆ ಮಾಡಬೇಕೆಂದು ಸಿಇಓ ಅವರು ಸೂಚನೆ ನೀಡಿದರು.

ವ್ಯಾಪಕ ಪ್ರಚಾರ: ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳು ತಾಲೂಕಾಡಳಿತ, ಗ್ರಾಮ ಪಂಚಾಯತಗಳ ಸಹಯೋಗದಲ್ಲಿ ವ್ಯಾಪಕ ಪ್ರಚಾರ ಮಾಡಬೇಕು. ಶಾಲಾ ತರಗತಿಗೆ ತೊಂದರೆಯಾಗದಂತೆ ಶಿಕ್ಷಣ ಇಲಾಖೆಯಿಂದ ಮಕ್ಕಳಿಗೆ ಜಾಗೃತಿ ಮೂಡಿಸಬೇಕು. ಅಂಗನವಾಡಿ ಶಿಕ್ಷಕಿಯರಿಂದಲು ಸಹ ಜಾಗೃತಿ ಮೂಡಿಸಬೇಕು. ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ಕುಷ್ಠರೋಗದ ಬಗ್ಗೆ ಪ್ರಚಾರ ನಡೆಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ, ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನದ ಅಂಗವಾಗಿ ಜನಜಾಗೃತಿಯ ಭಿತ್ತಿಪತ್ರ ಬಿಡುಗಡೆ ನಡೆಯಿತು.

## ವಿಶೇಷ ಚೇತನರಿಗೆ ಸೌಲಭ್ಯ, ಸಮಾನತೆ: ನ್ಯಾಯಾಧೀಶ ಆನಂದ್ ಹೆಚ್ ಕಣ್ಣೂರ್ ಕರೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಅ.29–**ವಿಶೇಷ ಚೇತನರಿಗೆ ಸರಿಯಾದ ಸೌಲಭ್ಯ, ಅವಕಾಶ ಮತ್ತು ಸಮಾನತೆ ನೀಡಲು ಕಾನೂನಿನಲ್ಲಿ ಕಾಯ್ದೆ ರೂಪಿಸಲಾಗಿದೆ ಎಂದು ಮಾನ್ವಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯ ದಂಡಾಧಿಕಾರಿಗಳಾದ ಆನಂದ್ ಹೆಚ್ ಕಣ್ಣೂರ್ ಅವರು ಹೇಳಿದರು.



ಶಾಸಕರ ಭವನದಲ್ಲಿ ಪುರಸಭೆ ಕಾರ್ಯಾಲಯ, ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ನ್ಯಾಯವಾದಿಗಳ ಸಂಘ ಮತ್ತು ಸಂಕಲ್ಪ ಶಿಕ್ಷಣ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಪುರಸಭೆಯ 2024-25ನೇ ಸಾಲಿನ ಎಸ್‌ಎಫ್‌ಸಿ (SFC) ಅನುದಾನದಡಿ ಶೇಕಡ 5ರ ಹಂಚಿಕೆ ಯೋಜನೆಯಲ್ಲಿ ವಿಕಲಚೇತನರು ಹಾಗೂ ಹಿರಿಯ ನಾಗರಿಕರಿಗೆ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, "ವಿಶೇಷ ಚೇತನರು ಸಮಾಜದಲ್ಲಿ ಬಹಳಷ್ಟು ನಿರ್ಲಕ್ಷ್ಯಕ್ಕೆ ಒಳಗಾಗಿರುತ್ತಾರೆ. ಇಂತಹ ವರ್ಗದ ಹಿತರಕ್ಷಣೆಗಾಗಿ ಕಾನೂನಿನಲ್ಲಿ ಕಾಯ್ದೆ ಇದೆ. ಪ್ರತಿಯೊಬ್ಬ ವಿಕಲಚೇತನರು ಈ ಕಾಯ್ದೆಯ ಬಗ್ಗೆ ತಿಳಿದುಕೊಂಡು, ಸರ್ಕಾರದಿಂದ ವಿವಿಧ ಸೌಲಭ್ಯಗಳು ಹಾಗೂ ಸರ್ಕಾರಿ ನೌಕರಿಗಳನ್ನು ಪಡೆದುಕೊಳ್ಳಬೇಕು" ಎಂದು ಕರೆ ನೀಡಿದರು. ಅಲ್ಲದೆ, ನ್ಯಾಯಾಲಯದಲ್ಲಿ ಉಚಿತ ಕಾನೂನು ಸಲಹೆಗಳನ್ನು ನೀಡಲಾಗುತ್ತಿದ್ದು, ಅದರ ಸೌಲಭ್ಯವನ್ನು ಪಡೆದುಕೊಳ್ಳುವಂತೆ ಸಲಹೆ ನೀಡಿದರು. ಇಂತಹ ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಒಳ್ಳೆಯ ಬೆಳವಣಿಗೆ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸವನ್ನು ರಾಘವೇಂದ್ರ ಅವರು ನೀಡಿದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ದೇವಮಾನೆ, ಪುರಸಭೆ ಅಧ್ಯಕ್ಷೆ ಮೀನಾಕ್ಷಿ ರಾಮಕೃಷ್ಣ, ಖಾಲಿದ್ ಅಹ್ಮದ್, ಪಿಎಸ್‌ಐ ಅಜ್ಮೀರ್ ಖುರೇಶಿ, ವಕೀಲರ ಸಂಘದ ಅಧ್ಯಕ್ಷ ರವಿಕುಮಾರ ಪಾಟೀಲ್, ಚನ್ನಬಸವ ನಾಯಕ ಬಲ್ಲಟಗಿ, ಲಕ್ಷ್ಮೀದೇವಿ ನಾಯಕ, ಸಂಕಲ್ಪ ಶಿಕ್ಷಣ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಪರಶುರಾಮ ಬಾಗಲವಾಡ, ಚಂದ್ರು ನಾಯಕ, ಹನುಮೇಶ ಕಾತರಿಕಿ, ಎಂಡಿ ಜಾಫರ, ಅನಿಲ್ ಕುಮಾರ, ಹನಮೇಶ ಜಾಗೀರಪನ್ನೂರು, ಪ್ರಶಾಂತ ಸೇರಿದಂತೆ ಹಲವರು ಉಪಸ್ಥಿತರಿದ್ದರು.ಕಾರ್ಯಕ್ರಮದ ನಿರೂಪಣೆಯನ್ನು ಯಲ್ಲಪ್ಪ ಬಾದರದಿನ್ನಿ ನೆರವೇರಿಸಿದರೆ, ಪಿ.ರವಿಕುಮಾರ ಸ್ವಾಗತಿಸಿದರು.

## ಪತ್ರಕರ್ತ ಟಿಜೆಎಸ್ ಜಾರ್ಜ್ ದತ್ತಿ ರಾಷ್ಟ್ರೀಯ ಪ್ರಶಸ್ತಿ ಸ್ಥಾಪನೆ: ವಿಧಾನ ಪರಿಷತ್ ಸದಸ್ಯ ಕೆ.ಶಿವಕುಮಾರ್ ಘೋಷಣೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.29–**ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಹಿರಿಯ ಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ಅವರ ಹೆಸರಿನಲ್ಲಿ ರಾಷ್ಟ್ರೀಯ ಮಟ್ಟದಲ್ಲಿ ಮಾಧ್ಯಮ ಸಂಸ್ಥೆಗಳ ಸಂಪಾದಕರಿಗೆ ದತ್ತಿ ಪ್ರಶಸ್ತಿ ಸ್ಥಾಪಿಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಕೆ.ಶಿವಕುಮಾರ್ ಅವರು ಘೋಷಿಸಿದರು.



ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಇತ್ತೀಚೆಗೆ ನಡೆದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಸಾಮಾಜಿಕ ನ್ಯಾಯದ ಕುರಿತು ಬರೆಯುವ ಅಂಕಣಕಾರರಿಗೆ ತಾವು ಈಗಾಗಲೇ "ಮೂಕನಾಯಕ ಡಾ.ಬಿ.ಆರ್. ಅಂಬೇಡ್ಕರ್ ದತ್ತಿ ಪ್ರಶಸ್ತಿಯನ್ನು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ಸ್ಥಾಪಿಸಿದ್ದು, ಅದರಂತೆ ಇತ್ತೀಚೆಗೆ ನಿಧನರಾದ ಹಿರಿಯ ಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ಅವರ ಹೆಸರಿನಲ್ಲಿ ಸಹ ದತ್ತಿ ಪ್ರಶಸ್ತಿ ಸ್ಥಾಪಿಸಲಾಗುವುದು. ಟಿ.ಜೆ.ಎಸ್. ಜಾರ್ಜ್ ಅವರು ನಿಷ್ಪಕ್ಷಪಾತಿ ಪತ್ರಕರ್ತರಾಗಿದ್ದರು. ಅವರು ಸ್ವತಃ ಪತ್ರಕರ್ತರ ವರದಿಗಳನ್ನು ತಿದ್ದಿ, ಮಾರ್ಗದರ್ಶನ ನೀಡುತ್ತಿದ್ದರು. ಅವರ ಹೆಸರಿನಲ್ಲಿ ರಾಷ್ಟ್ರಮಟ್ಟದಲ್ಲಿ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುವ ಪತ್ರಕರ್ತರನ್ನು ಗುರುತಿಸುವ ಸಲುವಾಗಿ 1.5 ಲಕ್ಷ ರೂ.ಗಳ ದತ್ತಿನಿಧಿ ಸ್ಥಾಪಿಸುವುದಾಗಿ ತಿಳಿಸಿದರು.

ತಾವು ಇನ್ನೂ ಪತ್ರಿಕೋದ್ಯಮದಿಂದ ಹೊರಬಂದಿಲ್ಲ ಎಂದ ಕೆ.ಶಿವಕುಮಾರ್ ಅವರು, ಸದನದಲ್ಲಿಯೂ ಪತ್ರಕರ್ತರು ಹಾಗೂ ಪತ್ರಿಕೋದ್ಯಮ ಕ್ಷೇತ್ರದ ಕುರಿತು ದನಿ ಎತ್ತುವುದಾಗಿ ಅವರು ತಿಳಿಸಿದರು. ತಮ್ಮ ಪತ್ರಕರ್ತ ವೃತ್ತಿ ಜೀವನ ಹಾಗೂ ಅಕಾಡೆಮಿಯ ಸದಸ್ಯರಾಗಿ ಕಾರ್ಯನಿರ್ವಹಣೆಯ ಸಂದರ್ಭಗಳನ್ನು ಮೆಲುಕು ಹಾಕಿದ ಶಿವಕುಮಾರ್ ಅವರು ಅಕಾಡೆಮಿಯ ಚಟುವಟಿಕೆಗಳಿಗೆ ಸದಾ ಬೆಂಬಲ ನೀಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಕಾಡೆಮಿಯ ಅಧ್ಯಕ್ಷರಾದ ಆಯೇಶಾ ಖಾನಂ ಅವರು, ಶಿವಕುಮಾರ್ ಅವರು ಮೂರು ದಶಕಗಳಿಂದ ಪತ್ರಕರ್ತರಾಗಿ ಕಾರ್ಯನಿರ್ವಹಿಸಿದ್ದು, ತಮ್ಮ ನಿಷ್ಠುರ ವರದಿಗಳಿಗಾಗಿ ಹೆಸರುವಾಸಿಯಾಗಿದ್ದಾರೆ. ಅವರು ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಯಾಗಿರುವುದು ಪತ್ರಕರ್ತರಿಗೆಲ್ಲ ಹೆಮ್ಮೆಯ ವಿಷಯ. ಅವರು ಅಕಾಡೆಮಿಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದು, ಅವರ ಬೆಂಬಲ ಪತ್ರಕರ್ತರಿಗೆ ಸದಾ ಇರುವುದೆಂಬ ವಿಶ್ವಾಸ ವ್ಯಕ್ತಪಡಿಸಿದರು.

ಸದಸ್ಯರಾದ ಕೆ. ನಿಂಗಜ್ಜ, ಕೆ.ವೆಂಕಟೇಶ್, ಶಿವಾನಂದ ತಗಡೂರು, ಅಬ್ಬಾಸ್ ಮುಲ್ಲಾ ಮೊದಲಾದವರು ಶಿವಕುಮಾರ್ ಅವರ ಕುರಿತು ಮಾತನಾಡಿದರು.

## ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದ 1,82,000 ಜನರಿಗೆ ದಂಡ: ವಿ.ಎಸ್.ಉಗ್ರಪ್ಪ

**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.28–**ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘಿಸಿದ 1,82,000 ಜನರಿಗೆ ದಂಡ ವಿದಿಸಿ ಎಚ್ಚರಿಕೆ ನೀಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಅಧ್ಯಕ್ಷರಾದ ವಿ.ಎಸ್. ಉಗ್ರಪ್ಪ ಅವರು ತಿಳಿಸಿದ್ದಾರೆ.

ಮಹಿಳಾ ಮತ್ತು ಮಕ್ಕಳ ಮೇಲಿನ ಶೋಷಣೆ, ದೌರ್ಜನ್ಯ, ಅತ್ಯಾಚಾರ ನಿಯಂತ್ರಿಸುವ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದ ಕುರಿತು ಇತ್ತೀಚೆಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧಿಸುವ, ಸಿಗರೇಟ್ ಮತ್ತು ಇತರ ತಂಬಾಕು ಉತ್ಪನ್ನಗಳ ನಿಯಂತ್ರಣ ಕಾಯ್ದೆ-2003 ಅಡಿಯಲ್ಲಿ ಏಪ್ರಿಲ್‌ನಿಂದ ಸೆಪ್ಟೆಂಬರ್-2025 ತಿಂಗಳವರೆಗೆ ಸುಮಾರು 1,82,000 ಜನರಿಗೆ ದಂಡ ವಿದಿಸಲಾಗಿದೆ.

ಶಾಲಾ/ಕಾಲೇಜುಗಳಲ್ಲಿ 100 ಮೀಟರ್ ವ್ಯಾಪ್ತಿಯಲ್ಲಿ 2470 ಜನರು ಧೂಮಪಾನ ನಿಷೇಧ ಕಾಯಿದೆಯನ್ನು ಉಲ್ಲಂಘನೆ ಮಾಡಿದ್ದು ಅವರೆಲ್ಲರಿಗೂ ದಂಡ ವಿಧಿಸಲಾಗಿದೆ. ಇದರಿಂದಾಗಿ ಪ್ರತಿ ವರ್ಷ 45 ಲಕ್ಷ ರೂ.ದಂಡ ಸಂಗ್ರಹವಾಗುತ್ತಿದೆ. ಈ ಪೈಕಿ, 21 ವರ್ಷದೊಳಗಿನ ಯುವಜನರ ದತ್ತಾಂಶ ನೀಡಬೇಕು ಎಂದು ವಿ.ಎಸ್. ಉಗ್ರಪ್ಪ ಅವರು ಆರೋಗ್ಯ ಇಲಾಖೆಗೆ ಸೂಚನೆ ನೀಡಿದ್ದಾರೆ.


21 ವರ್ಷದೊಳಗಿನ ಯುವಜನರನ್ನು ಧೂಮಪಾನ, ಮದ್ಯಪಾನ, ತಂಬಾಕು ಸೇವನೆ, ಡ್ರಗ್ಸ್ ಸೇವೆಯಂತಹ ಮಾದಕ ವಸ್ತುಗಳ ಸೇವನೆಯಿಂದ ವ್ಯಸನ ಮುಕ್ತರನ್ನಾಗಿಸಲು ಮಾದಕ ವಸ್ತು ವ್ಯಸನ ಮುಕ್ತ ಕೇಂದ್ರಗಳ ಮೂಲಕ ಏಪ್ರಿಲ್ ನಿಂದ ಸೆಪ್ಟೆಂಬರ್-2025ರವರೆಗೆ ಸುಮಾರು 1 ಲಕ್ಷ ಯುವಜನರಿಗೆ ಸಮಾಲೋಚನೆ ನೀಡಲಾಗಿದೆ. ಆರೋಗ್ಯ ಇಲಾಖೆ ಮತ್ತು ನಿಮಾನ್ಸ್ ಸಹಯೋಗದಲ್ಲಿ ಟೆಲಿಮಾನಸ್ 14,416 (2ನೇಪುಟಕ್ಕೆ)

## ರಾಯಚೂರು ಮಹಾನಗರ ಪಾಲಿಕೆಗೆ ರಾಜ್ಯಮಟ್ಟದ ಅತ್ಯುತ್ತಮ ಕಾರ್ಯಕ್ಷಮತೆ ಪ್ರಶಸ್ತಿ ಗರಿ

**ಯುವ ಮಾರ್ಗ ಸುದ್ದಿ**

**ರಾಯಚೂರು,ಅ.29–** ರಾಷ್ಟ್ರೀಯ ಜೀವನೋಪಾಯ ಅಭಿಯಾನವು ಡೇ-ನಲ್ಮ್ ಅಭಿಯಾನದಡಿ ಪ್ರಕಟಿಸಿದ ಕೌಶಲ ಕರ್ನಾಟಕ ಪ್ರಶಸ್ತಿಗೆ ರಾಯಚೂರು ಮಹಾನಗರ ಪಾಲಿಕೆಯು ಆಯ್ಕೆಯಾಗಿದ್ದು, ಆಯ್ಕೆಯಾದ ಸ್ವಸಹಾಯ ಗುಂಪುಗಳ ಪರವಾಗಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರಿಗೆ ರಾಷ್ಟ್ರೀಯ ಜೀವನೋಪಾಯ ಅಭಿಯಾನದ ನಿರ್ದೇಶಕರು ಅಭಿನಂದನೆ ತಿಳಿಸಿದ್ದಾರೆ.

ರಾಜ್ಯದ ವಿವಿಧ ಜಿಲ್ಲೆಗಳಿಂದ ಅತ್ಯುತ್ತಮ ಸಾಧನೆ ಮಾಡಿದ ಸ್ವ-ಸಹಾಯ ಗುಂಪುಗಳ ಪ್ರಸ್ತಾವನೆ ಪರಿಶೀಲಿಸಲಾಗಿ, ನಿಗದಿತ ಅರ್ಹ ಮಾನದಂಡಗಳನ್ವಯ ಪ್ರಕಟಿಸಿದ ಪಟ್ಟಿಯಲ್ಲಿ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಅಕ್ಕಮಹಾದೇವಿ ಸ್ವಸಹಾಯ ಸಂಘಕ್ಕೆ ಇಡೀ ರಾಜ್ಯದಲ್ಲೇ ಮೂರನೇ ಸ್ಥಾನ ಲಭಿಸಿದೆ. ಮೊದಲ ಸ್ಥಾನವನ್ನು ಶಿವಮೊಗ್ಗ ಜಿಲ್ಲೆ ಪಡೆದುಕೊಂಡಿದ್ದು, ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಎರಡನೇ ಸ್ಥಾನ ಲಭಿಸಿದೆ.



ಆಯುಕ್ತರು ಹರ್ಷ: ರಾಯಚೂರು ಮಹಾನಗರ ಪಾಲಿಕೆಯು ವೇಗವಾಗಿ ಬೆಳೆಯುತ್ತಿದೆ. ಸ್ವಸಹಾಯ ಸಂಘದ ಕಾರ್ಯಚಟುವಟಿಕೆಗಳಿಗೆ ಪಾಲಿಕೆಯು ಹೆಚ್ಚಿನ ಉತ್ತೇಜನ, ನಿರಂತರ ಮಾರ್ಗದರ್ಶನ ಮತ್ತು ಬೆಂಬಲ ನೀಡಿದೆ ಎಂಬುದಕ್ಕೆ ಈ ಪ್ರಶಸ್ತಿಯೇ ಸಾಕ್ಷಿಯಾಗಿದೆ.

ಅಕ್ಕಮಹಾದೇವಿ ಸ್ವಸಹಾಯ ಸಂಘದ ಚಟುವಟಿಕೆಗಳು ಇನ್ನಿತರ ಸ್ವಸಹಾಯ ಸಂಘಗಳಿಗೆ ಸ್ಫೂರ್ತಿ ಯಾಗಲಿ ಎಂದು ಇದೆ ವೇಳೆ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಪ್ರತಿಕ್ರಿಯಿಸಿದ್ದಾರೆ.

## ಮೊದಲನೇಯ ಪುಟದಿಂದ

# ಶ್ರೀ ಭಕ್ತ ಕನಕದಾಸ ಜಯಂತಿ ಆಚರಣೆ ಸಿದ್ಧತೆಗೆ ಸೂಚನೆ

ನೀಡಿದರು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಗಣ್ಯರಿಗೆ ವಿತರಿಸಬೇಕು ಎಂದು ತಿಳಿಸಿದರು.

ಈ ಜಯಂತ್ಯುತ್ಸವಕ್ಕೆ ಸಾರ್ವಜನಿಕರು, ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ನಾಗೇಂದ್ರಪ್ಪ ಮಠಮಾರಿ, ಹನುಮಂತಪ್ಪ ಜಾಲಿಬೆಂಚಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಬಿ ಬಸವರಾಜ, ಟಿ ನರಸಿಂಹ, ಕೆ ವೇಣುಗೋಪಾಲ, ಕೆ ಲಕ್ಷ್ಮಣಸ್ವಾಮಿ, ಗುರುಪ್ರತಾಪ, ಕೆ ನಾಗರಾಜ, ಎಸ್ ರಾಮಣ್ಣ, ಕೆ ರಮೇಶ ಮಾಡಲದಿನ್ನಿ, ಕೆ ತಿಮ್ಮಪ್ಪ ಮರ್ಚಟ್ಹಾಳ, ನಾಗರಾಜ ವಕೀಲರು, ಕೆ ಬಡೆಪ್ಪ ಮಠಮಾರಿ, ಹನುಮಂತಪ್ಪ ವಕೀಲರು, ಶೇಖರ ವಾರದ, ಮಹಾದೇವಪ್ಪ ಮಿರ್ಜಾಪುರ, ಎಪಿಎಂಸಿ ಸದಸ್ಯರಾದ ಜಿ.ಹನುಮಂತ, ವಿವಿಧ ಇಲಾಖೆಯ ಅಧಿಕಾರಿಗಳಾದ ಜಿ.ಯು.ಹುಡೇದ, ಸದಾಶಿವಪ್ಪ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಕುಷ್ಠರೋಗ ಪತ್ತೆ ಹಚ್ಚುವ ಅಭಿಯಾನ ಅಚ್ಚುಕಟ್ಟಾಗಿ ನಡೆಯಲಿ: ಈಶ್ವರ ಕಾಂದೂ ಸೂಚನೆ

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಜಿಲ್ಲಾ ಸರ್ವೇಕ್ಷಣಾಧಿಕಾರಿ

ಡಾ.ಗಣೇಶ್ ಕೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹ್ಮದ್ ಶಾಕೀರ್ ಮೊಹಿಯುದ್ದೀನ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರಯ್ಯ, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಿವಕುಮಾರ್, ತಾಲೂಕ ಆರೋಗ್ಯ ಅಧಿಕಾರಿ ಡಾ.ಬನದೇಶ್ ಗಬ್ಬೂರು, ಡಾ.ಫರಹಾ ನಸ್ರಿನ್ ಖಾಜಿ, ಡಾ.ಮಲ್ಲಿಕಾರ್ಜುನ ರೆಡ್ಡಿ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ರಂಗಸ್ವಾಮಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ ದೊಡ್ಡಮನಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಗುರುಪ್ರಸಾದ್ ಸೇರಿದಂತೆ ನವೋದಯ ವೈದ್ಯಕೀಯ ಕಾಲೇಜ್‌ನ ಚರ್ಮರೋಗ ತಜ್ಞ ವೈದ್ಯರು ಹಾಗೂ ಇನ್ನಿತರರು ಇದ್ದರು.

# ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡಿದ 1,82,000 ಜನರಿಗೆ ದಂಡ: ವಿ.ಎಸ್.ಉಗ್ರಪ್ಪ

ಸಹಾಯವಾಣಿಯನ್ನು ತೆರೆಯಲಾಗಿದೆ. ಈ ಸಹಾಯವಾಣಿ ಮೂಲಕ ಮಾದಕ ವ್ಯಸನ ಪೀಡಿತ ಮಕ್ಕಳ ಮುಂದಿನ ಭವಿಷ್ಯವನ್ನು ಈ ಸುಧಾರಿಸಲು ಅಗತ್ಯ ಸಹಾಯ ಮತ್ತು ಸಮಾಲೋಚನೆ ಪಡೆಯಬಹುದಾಗಿದೆ.

ಅತ್ಯಾಚಾರ, ಮಹಿಳಾ ದೌರ್ಜನ್ಯ ಆತ್ಮಹತ್ಯೆ ಮತ್ತು ಇತರ ಪ್ರಕರಣಗಳನ್ನು ವೈಭವೀಕರಿಸಿ ಭಯಗೊಳ್ಳುವಂತೆ ಪ್ರಸಾರ ಮಾಡುವುದನ್ನು ದೃಶ್ಯ ಮಾಧ್ಯಮಗಳು ನಿಯಂತ್ರಿಸಬೇಕು. ಪ್ರೆಸ್ ಕೌನ್ಸಿಲ್ ಮಾರ್ಗಸೂಚಿಗಳನ್ನು ದೃಶ್ಯ ಮಾಧ್ಯಮಗಳು ಅಳವಡಿಸಿಕೊಳ್ಳಬೇಕು. ಯಾರು ಈ ರೀತಿಯ ಪ್ರಕರಣಗಳಿಗೆ ಪ್ರಚಾರ ನೀಡುತ್ತಾರೋ ಅವರ ಮೇಲೆ ಮಹಿಳೆಯರ ಅಸಭ್ಯ ಪ್ರಾತಿನಿಧ್ಯ(ನಿಷೇಧ) ಕಾಯ್ದೆ–1986 (Indescent Representation of Women (Prohibition) Act–1986) ರಡಿಯಲ್ಲಿ ಸ್ವಯಂ ಪ್ರೇರಿತವಾಗಿ ಕ್ರಮ ತೆಗೆದುಕೊಳ್ಳಬೇಕು. ಅಥವಾ ಕೇಬಲ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮವಹಿಸಲು ಅಥವಾ ಫಿಲ್ಮ್ ಆಕ್ಟ್ ಇದ್ದರೆ ಆ ಕಾಯಿದೆಯಡಿಯಲ್ಲಿ ಕ್ರಮ ವಹಿಸಲು, ಪತ್ರಿಕೋದ್ಯಮಕ್ಕೆ ಸಂಬಂಧಿಸಿದ್ದರೆ ಪತ್ರಿಕೋದ್ಯಮ ಕಾಯಿದೆಯಡಿ ಕ್ರಮವಹಿಸಲು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಬೇಕು. ಈ ವಿಷಯಕ್ಕೆ ಸಂಬಂಧಿಸಿದಂತೆ ಮಹಿಳಾ ಆಯೋಗ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕೆಂದು ಸೂಚಿಸಲಾಯಿತು.

# ರಾಯಚೂರಿನಲ್ಲಿ ಹತ್ತಿ ಬೆಳೆ ಹೆಚ್ಚಿನ ಸಾಂದ್ರತೆಯ ನಾಟಿ ಪದ್ಧತಿಯ ಕ್ಷೇತ್ರೋತ್ಸವ, ರೈತರ ಸಂವಾದ ಯಶಸ್ವಿ



ಯುವ ಮಾರ್ಗ ಸುದ್ದಿ

**ರಾಯಚೂರು,ಅ.29–** ಹತ್ತಿ ಬೆಳೆಯಲ್ಲಿ ಹೆಚ್ಚಿನ ಸಾಂದ್ರತೆಯ ನಾಟಿ ಪದ್ಧತಿಯ ಕ್ಷೇತ್ರೋತ್ಸವ ಹಾಗೂ ರೈತರ ಸಂವಾದ ಕಾರ್ಯಕ್ರಮವು ಇತ್ತೀಚೆಗೆ ರಾಯಚೂರಿನ ಕಸಬೆಕ್ಯಾಂಪನ ಡಾ.ಶಂಕರಗೌಡ ಫಾರ್ಮ ಹೌಸ್‌ನಲ್ಲಿ ನಡೆಯಿತು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಕೃಷಿ ಇಲಾಖೆಯ ಸಹಯೋಗದಲ್ಲಿ ರಾಯಚೂರಿನ ಕೃಷಿ ತಂತ್ರಜ್ಞರ ಸಂಸ್ಥೆಯು ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಕಾಯಕಶ್ರೀ ಪ್ರಶಸ್ತಿ ವಿಜೇತರು ಹಾಗೂ ಪ್ರಗತಿಪರ ರೈತರಾದ ಶರಣಪ್ಪಗೌಡ ಅವರು ಚಾಲನೆ ನೀಡಿದರು.

ಪ್ರಾಯೋಗಿಕವಾಗಿ ಮೂರು ಬಿ.ಟಿ ಹೈಬ್ರಿಡ್ ಮತ್ತು ಎರಡು ವಿವಿಧ ಜಾತಿಯ ಹತ್ತಿ ಬೆಳೆಯಲ್ಲಿ ಎಕರೆಗೆ 29,000 ಗಿಡಗಳ ಸಾಂದ್ರತೆಯಿಂದ ಎಕರೆವಾರು 16 ಕ್ವಿಂಟಲ್ ಇಳುವರಿಯನ್ನು ಏಕಕಾಲಕ್ಕೆ ಹತ್ತಿ ಬಿಡಿಸಿ 120 ರಿಂದ 130 ದಿನಗಳಲ್ಲಿ ಕೊಯ್ಲು ಅಪೇಕ್ಷಿಸುವ ಬಗ್ಗೆ ಸಮಗ್ರ ಚರ್ಚಿಸಲಾಯಿತು. ಸಿಎ ಶಿವಾನಂದ ಅಮರಖೇಡ ಮತ್ತು ಶ್ರೀ ವಿಜಯ ಎನ್ ಅವರು ತಮ್ಮ ಹೊದಲ್ಲಿ ಹೆಚ್‌ಡಿಪಿಎಸ್‌ನ್ನು ಆಸಕ್ತಿಯಿಂದ ಅನುಷ್ಠಾನಗೊಳಿಸಿದ ಬಗ್ಗೆ ವಿವರಿಸಿದರು.

ಬೆಂಗಳೂರಿನ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಡಾ.ಎ.ಬಿ. ಪಾಟೀಲ ಅವರು ಮಾತನಾಡಿ, ರೈತರು ಹತ್ತಿ ಬೆಳೆಯಲ್ಲಿ ವಿನೂತನ ಪದ್ಧತಿಯಾದ ಹೆಚ್‌ಡಿಪಿಎಸ್‌ನ್ನು ಅಳವಡಿಸಿ ಬೆಳೆಯನ್ನು ಏಕಕಾಲಕ್ಕೆ ಕಟಾವು ಮಾಡಿ ಲಾಭವನ್ನು ದ್ವಿಗುಣಗೊಳಿಸಬೇಕು ಎಂದು ಸಲಹೆ ಮಾಡಿದರು.

ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಹನುಮಂತಪ್ಪ ಎಮ್. ಅವರು ಮಾತನಾಡಿ, ಹತ್ತಿ ಬೆಳೆಯಲ್ಲಿ ಅಡಚಣೆಗಳನ್ನು ನಿವಾರಿಸಿಕೊಂಡು ಉತ್ತಮ ಲಾಭದಾಯಕವಾದ ಇಳುವರಿಯನ್ನು ಏಕ ಕಾಲಕ್ಕೆ ಕೊಯ್ಲುನ್ನು ಮಾಡಿ ಹಿಂಗಾರಿನಲ್ಲಿ ಎರಡನೇ ಬೆಳೆಯನ್ನು ರೈತರು ಪಡೆದುಕೊಳ್ಳಬಹುದು ಎಂದು ಸಲಹೆ ಮಾಡಿದರು.

ಕೃಷಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ.ಬಿ.ವಿ. ಪಾಟೀಲ ಅವರು ಮಾತನಾಡಿ, ಅಮೇರಿಕಾ, ಬ್ರೆಜಿಲ್ ಮತ್ತು ಇನ್ನೀತರ ದೇಶಗಳಲ್ಲಿ ಹೆಚ್‌ಡಿಪಿಎಸ್ ಪದ್ಧತಿ ಅಳವಡಿಸಿಕೊಂಡು ಉತ್ತಮ ಉಳುವರಿ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಕೃಷಿ ವಿಶ್ವವಿದ್ಯಾಲಯದ ವಿಶ್ರಾಂತ ಡೀನ್ ಡಾ.ಸಿ.ವಿ.ಪಾಟೀಲ ಮಾತನಾಡಿ, ಹತ್ತಿ ಬೆಳೆಯು ವಾಣಿಜ್ಯ ಬೆಳೆಯಾಗಿದ್ದು, ಇದನ್ನು ಲಾಭದಾಯಕವಾಗಿ ಬೆಳೆಯಲು ಎಚ್‌ಡಿಪಿಎಸ್ ಪ್ರಯೋಗ ಅತ್ಯಗತ್ಯ ಎಂದು ಸಲಹೆ ಮಾಡಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ ಚವ್ಹಾಣ್ ಅವರು ಮಾತನಾಡಿ, ರಾಜ್ಯದಲ್ಲಿಯೇ ಅತಿ ಹೆಚ್ಚು ಹತ್ತಿ ಬೆಳೆಯುವ ಜಿಲ್ಲೆಗಳಲ್ಲಿ ರಾಯಚೂರು ಪ್ರಮುಖವಾಗಿದ್ದು, ಜಿಲ್ಲೆಯಲ್ಲಿ ಒಟ್ಟು 1.8 ಲಕ್ಷ ಹೆಕ್ಟರ್ ಹತ್ತಿ ಬೆಳೆ ಇದ್ದು, ಹೆಚ್‌ಡಿಪಿಎಸ್ ಯನ್ನು ಅಳವಡಿಸಿಕೊಂಡಲ್ಲಿ ರೈತರು ಇನ್ನೂ ಗರಿಷ್ಠ ಲಾಭವನ್ನು ಪಡೆದುಕೊಳ್ಳಲು ಸಫಲರಾಗುತ್ತಾರೆ ಮತ್ತು ಈ ಹೆಚ್‌ಡಿಪಿಎಸ್ ಉತ್ತೇಜಿಸಲು ನವೀನ ಯಂತ್ರೋಪಕರಣಗಳನ್ನು ಒದಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿ ತಿಳಿಸಿದರು. ಹೆಚ್‌ಡಿಪಿಎಸ್ ಮಾಹಿತಿಯನ್ನು ರೈತರಿಗೆ ತಲುಪಿಸುವ ಪ್ರಯತ್ನವನ್ನು ಕೈಗೊಂಡಿರುವುದಕ್ಕೆ ಕೃಷಿ ತಂತ್ರಜ್ಞರ ಸಂಸ್ಥೆ ರಾಯಚೂರು ಇವರನ್ನು ಮನಪೂರ್ವಕವಾಗಿ ಶ್ಲಾಘಿಸಿದರು.

ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಆರ್.ಎ. ಪಾಟೀಲ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಹೆಚ್‌ಡಿಪಿಎಸ್ ಪ್ರಯೋಗದ ಕಾರ್ಯಕ್ರಮಕ್ಕೆ ಸಿಎ ಶಿವಾನಂದ ಅಮರಖೇಡ ಹಾಗೂ ಅವರ ಕುಟುಂಬದವರು ತಮ್ಮ ಜಮೀನು ಒದಗಿಸಿಕೊಟ್ಟಿದ್ದಕ್ಕೆ ಮತ್ತು ಈ ಕಾರ್ಯಕ್ರಮಕ್ಕೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ



ಇಲಾಖೆ ಹಾಗೂ ಕಾವೇರಿ ಸೀಡ್ಸ್ ರಾಯಚೂರು ಇವರ ಸಹಕಾರ ಸ್ಮರಣೀಯವಾಗಿದೆ. ಕೃಷಿ ತಂತ್ರಜ್ಞರ ಸಂಸ್ಥೆಯು ಸದಾಕಾಲ ರೈತರ ಹಿತಕ್ಕಾಗಿ ಹಾಗೂ ವಿವಿಧ ವಿಷಯಗಳ ಬಗ್ಗೆ ಮಾಹಿತಿ ಒದಗಿಸಲು ಬದ್ಧವಿದ್ದು ಈ ಸಂಸ್ಥೆಯ ಸದುಪಯೋಗ ಪಡೆದುಕೊಳ್ಳಲು ರೈತರಲ್ಲಿ ವಿನಂತಿಸಿದರು.

ಡಾ.ಭೀಮಣ್ಣ ಹಾಗೂ ಡಾ.ಜೆ.ಎಮ್. ನಿಡಗುಂದಿ ಅವರು ಪ್ರಾಸ್ತಾವಿಕ ಮಾತನಾಡಿ, ಈ ವಿನೂತ ಹೆಚ್‌ಡಿಪಿಎಸ್ ಪದ್ಧತಿಯನ್ನು ಪರಿಚಯಿಸಿ ತಾಂತ್ರಿಕ ಮಾಹಿತಿ ನೀಡಿದರು.

ಸಮಾರಂಭದಲ್ಲಿ ಕೃಷಿ ವಿವಿಯ ಸಂಶೋಧನಾ ಮತ್ತು ವಿಸ್ತರಣಾ ನಿರ್ದೇಶಕರಾದ ಡಾ.ಅಮರೇಗೌಡ, ಕೃಷಿ ತಂತ್ರಜ್ಞರ ಸಂಸ್ಥೆಯ ಜಂಟಿ ಕಾರ್ಯದರ್ಶಿ ಸಿ.ಎಸ್.ಪಾಟೀಲ, ಸಿದ್ಧನಗೌಡ ಗಾರಲದಿನ್ನಿ ಹಾಗೂ ಕೃಷಿ ತಂತ್ರಜ್ಞರ ಸಂಸ್ಥೆಯ ಇತರೆ ಕಾರ್ಯಕಾರಿ ಸಮಿತಿ ಸದಸ್ಯರು, ಜಿಲ್ಲೆಯ ವಿವಿಧ ಭಾಗದ ಹತ್ತಿ ಬೆಳೆಯ ರೈತರು ಭಾಗವಹಿಸಿದ್ದರು. ಡಾ.ಶರಣಗೌಡ ಹಿರೇಗೌಡರ್ ನಿರೂಪಿಸಿದರು.

# ಸಿದ್ದು ಪೂರ್ಣಾವಧಿ ಸಿಎಂಗೆ ಒತ್ತಾಯ




**ಮೈಸೂರು, ಅ.29 –** ರಾಜ್ಯ ರಾಜಕಾರಣದಲ್ಲಿ ನವೆಂಬರ್ ಕ್ರಾಂತಿ, ನಾಯಕತ್ವ ಬದಲಾವಣೆ ಹಾಗೂ ಸಂಪುಟಪುನ ರಚನೆ ಕುರಿತಾಗಿ ಭಾರಿ ಚರ್ಚೆಗಳು ನಡೆಯುತ್ತಿವೆ.

ಇದರ ಬೆನ್ನಲ್ಲೆ ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಬೆಂಬಲಿಸಿ ಪೂರ್ಣಾವಧಿ ಸಿಎಂ ಎಂದು ಘೋಷಿಸಬೇಕು ಎಂದು ಒತ್ತಾಯಿಸಲಾಗಿದೆ. ಈ ಸಂಬಂಧ ಅಹಿಂದ ಸಂಘಟನೆಗಳು ಪತ್ರ ಚಳುವಳಿ ಆರಂಭಿಸಿದ್ದು, ಕಾಂಗ್ರೆಸ್ ಹೈ ಕಮಾಂಡ್‌ಗೆ ಪತ್ರ ಬರೆಯಲಾಗಿದೆ. ಮೈಸೂರಿನಲ್ಲಿ ರಾಮಸ್ವಾಮಿ ಮೃತದಲ್ಲಿ ಅಹಿಂದ ಒಕ್ಕೂಟದಿಂದ ಈ ಒಂದು ಪತ್ರ ಚಳವಳಿ ಆರಂಭಿಸಿದ್ದು ಗೊಂದಲಗಳಿಗೆ ತೆರೆ ಎಳೆಯುವಂತೆ ಒತ್ತಾಯಿಸಲಾಯಿತು. ಯಾರು ಮುಂದಿನ ಸಿಎಂ ಆಗ್ತಾರೆ, ಸಿಎಂ ರೇಸ್ ನಲ್ಲಿ ಯಾರು ಇದ್ದಾರೆ ಎಂದು ಸಾಕಷ್ಟು ಗೊಂದಲಗಳು ಮೂಡಿದ್ದು ಇವೆಲ್ಲಾ ಗೊಂದಲಗಳಿಗೆ ತೆರೆ ಎಳೆಯಬೇಕು.ಹಾಗೆಯೇ ಸಿದ್ದರಾಮಯ್ಯ ಅವರನ್ನು ಪೂರ್ಣಾವಧಿ ಸಿಎಂ ಎಂದು ಘೋಷಿಸಿ ಎಂದು ರಾಹುಲ್ ಗಾಂಧಿಗೆ ಪತ್ರದಲ್ಲಿ ಕೋರಲಾಗಿದೆ.

# ಕನ್ನೇರಿ ಶ್ರೀಗಳ ಅರ್ಜಿ ವಜಾ

**ನವದೆಹಲಿ, ಅ.29–** ಕೊಲ್ಲಾಪುರದ ಕನ್ನೇರಿ ಮಠದ ಶ್ರೀ ಕಾಡಸಿದ್ದೇಶ್ವರ ಸ್ವಾಮೀಜಿಗೆ ವಿಜಯಪುರ ಜಿಲ್ಲೆ ಪ್ರವೇಶಿಸದಂತೆ ಜಿಲ್ಲಾ ಆಡಳಿತ ನಿರ್ಬಂಧ ವಿಚಾರಕ್ಕೆ ಸಂಬಂಧಿಸಿದಂತೆ ಕನ್ನೇರಿ ಶ್ರೀಗಳು ಸಲ್ಲಿಸಿದ ಮೇಲ್ಮನವಿ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾ ಗೊಳಿಸಿದೆ.

ವಿಚಾರಣೆ ವೇಳೆ ಕನ್ನೆರಿ ಮಠದ ಸ್ವಾಮೀಜಿ ಕೀಳುಮಟ್ಟದ ಹೇಳಿಕೆ ನೀಡಿರುವುದು ಸರಿಯಲ್ಲ ಎಂದು ನ್ಯಾಯಮೂರ್ತಿಗಳಾದ ಪಂಕಜ್ ಮಿತ್ತಲ್ ಹಾಗೂ ಪ್ರಸನ್ನ ವರಾಲೆ ಅವರನ್ನೊಳಗೊಂಡ ಪೀಠ ಸ್ವಾಮೀಜಿಯನ್ನು ತರಾಟೆ ತೆಗೆದುಕೊಂಡಿತು. ಪ್ರಚೋದನಕಾರಿ ಹೇಳಿಕೆ ನೀಡಿರುವುದು ನಿಮ್ಮ ಘನತೆಗೆ ತಕ್ಕುದಲ್ಲ ಎಂದು ಕನ್ನೇರಿ ಶ್ರೀಗಳ ವಿರುದ್ಧ ಚಾಟಿ ಬೀಸಿದೆ.

ವಿಚಾರಣೆ ವೇಳೆ, ಹೈಕೋರ್ಟ್ ಹೇಳಿರುವುದರಲ್ಲಿ ತಪ್ಪೇನಿದೆ ಎಂದು ಸುಪ್ರೀಂ ಕೋರ್ಟ್ ಪ್ರಶ್ನಿಸಿತು. ನೀವು ಸ್ವಾಮೀಜಿಯಾಗಿ



ಗಂಭೀರವಾಗಿರಬೇಕು. ನೀವು ಒಳ್ಳೆಯ ಪ್ರಜೆಯಲ್ಲ. ಅವಹೇಳನಕಾರಿ ಭಾಷೆ ಬಳಸಿದ್ದೀರಿ. ವಾಕ್ ಸ್ವಾತಂತ್ರ್ಯ ವ್ಯಾಪ್ತಿಯಲ್ಲಿಲ್ಲ. ನೀವು ಮಾತನಾಡುವುದು ನಿಲ್ಲಿಸಿ ಮೌನವಾಗಿ ಬೇರೆ ಮಠದಲ್ಲಿ ಧ್ಯಾನ ಮಾಡಿ ಎಂದು ಸೂಚಿಸಿದೆ..

# ಜನರ ಗಮನ ಬೇರೆಡೆ ಸಳೆಯಲು ಆರ್‌ಎಸ್‌ಎಸ್ ವಿವಾದದ ಅಸ್ತ್ರ ಬಳಸುತ್ತಿದೆಯಾ ಕಾಂಗ್ರೆಸ್ ಸರ್ಕಾರ..?

**ಬೆಂಗಳೂರು, ಅ.29–** ನಾನಾ ರೀತಿಯ ಶುಲ್ಕ, ತೆರಿಗೆ ಹಾಗೂ ದರ ಏರಿಕೆಯಿಂದಾಗಿ ಜನಾಕ್ರೋಶಕ್ಕೆ ತುತ್ತಾಗಿರುವ ಕಾಂಗ್ರೆಸ್ ಸರ್ಕಾರ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನೆಲೆಯಲ್ಲಿ ಜನರ ಗಮನವನ್ನು ಬೇರೆಡೆ ಸೆಳೆಯಲು ಆರ್‌ಎಸ್‌ಎಸ್ ಸಂಬಂಧಿತ ವಿವಾದಗಳನ್ನು ಹುಟ್ಟುಹಾಕಿದೆ ಎಂಬ ಟೀಕೆಗಳು ಕೇಳಿ ಬರುತ್ತಿವೆ.

ಶುಲ್ಕ ಹಾಗೂ ದರ ಏರಿಕೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವೆ ಅಧಿಕಾರ ಹಂಚಿಕೆಯ ಪೈಪೋಟಿಯ ಮಾದರಿಯಲ್ಲೆ ಪ್ರಬಲ ಸ್ಪರ್ಧೆ ಕಂಡು ಬಂದಿದೆ. ಸಿದ್ದರಾಮಯ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿರುವ ನೆಪದಲ್ಲಿ ಸಾರಿಗೆ ಬಸ್ ಪ್ರಯಾಣ ದರ, ನೀರಿನ ದರ, ವಿದ್ಯುತ್ ದರ, ಮದ್ಯದ ಬೆಲೆ, ಆಸ್ತಿ ನೋಂದಣಿ ಮತ್ತು ದಸ್ತಾವೇಜುಗಳ ಶುಲ್ಕಗಳನ್ನು ಎರ್ರಾಬಿರ್ರಿ ಏರಿಕೆ ಮಾಡಿದೆ.

ಕಂದಾಯ, ಸಾರಿಗೆ, ಅಬಕಾರಿ, ಇಂಧನ ಇಲಾಖೆಗಳ ಈ ಜನವಿರೋಧಿ ದರ ಹೆಚ್ಚಳದಿಂದ ಸಾರ್ವಜನಿಕರು ಹೈರಾಣಾಗಿದ್ದರು. ಇದಕ್ಕೆ ಪೈಪೋಟಿ ನೀಡುವಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮ ವ್ಯಾಪ್ತಿಯ ಬೆಂಗಳೂರಿನ ನಗರಾಭಿವೃದ್ಧಿ ಇಲಾಖೆಯಲ್ಲಿ ಹಲವು ರೀತಿಯ ಶುಲ್ಕಗಳನ್ನು ಹೆಚ್ಚಿಸಿ ಚಿತ್ರವಿಚಿತ್ರವಾದ ನಿಯಮಗಳನ್ನು ರೂಪಿಸಿ ಜನರಿಗೆ ಈ ಸರ್ಕಾರದ ಸಹವಾಸವೇ ಸಾಕು ಎಂಬುವಷ್ಟು ರೇಜಿಗಿಡಿಸಿದ್ದಾರೆ.

ಸುಪ್ರಿ?ಂಕೋರ್ಟಿನ ತೀರ್ಪನ್ನು ನೆಪ ಮಾಡಿಕೊಂಡು ಸಿಸಿ, ಓಸಿ ಪ್ರಮಾಣ ಪತ್ರಗಳಿಲ್ಲದ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡುವುದಿಲ್ಲ ಎಂದು ಪಟ್ಟು ಹಿಡಿಯಲಾಗಿತ್ತು. ಜನ ಛೀಮಾರಿ ಹಾಕುವುದು ಹೆಚ್ಚಾದಾಗ ತಡವಾಗಿ ಸಭೆಗಳನ್ನು ನಡೆಸಿ 30,40 ಅಡಿಗಿಂತಲೂ ಕಡಿಮೆ ಅಳತೆಯ ನಿವೇಶನದಲ್ಲಿ ನಿರ್ಮಿಸಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸಿಸಿ, ಓಸಿಯ ವಿನಾಯಿತಿ ನೀಡುವ ನಿರ್ಣಯ ಕೈಗೊಳ್ಳಲಾಗಿದೆ.




ಆದರೆ ವಿಳಂಬವಾದ ಈ ಗ್ಯಾಪ್‌ನಲ್ಲಿ ಅಧಿಕಾರಿಗಳು ಮನೆ ಮಾಲೀಕರಿಂದ ಸಾಕಷ್ಟು ಹಣವನ್ನು ಸುಲಿಗೆ ಮಾಡಿದ್ದಾರೆ. ಇದು ಸರ್ಕಾರದ ಸುಲಿಗೆ ಎಂಬ ಭಾವನೆ ಜನರ ಮನಸ್ಸಿನಲ್ಲಿ ಆಳವಾಗಿ ಬೇರೂರಿದೆ.ಡಿ.ಕೆ.ಶಿವಕುಮಾರ್ ಅವರು ಪತ್ರಿಕಾಗೋಷ್ಠಿ ನಡೆಸಿದಾಗಲೆಲ್ಲಾ ಯಾರಿಗೂ ಒಂದು ಪೈಸೆ ಲಂಚ ಕೊಡಬೇಡಿ ಎಂದು ಜನರಿಗೆ ಎಚ್ಚರಿಕೆ ಕೊಡುತ್ತಲೇ ಇರುತ್ತಾರೆ, ಆದರೆ ಅಧಿಕಾರಿಗಳು ಪೈಸೆ ಲೆಕ್ಕದಲ್ಲಿ ಲಂಚ ಕೇಳುತ್ತಿಲ್ಲ, ಲಕ್ಷಗಳ ಪ್ರಮಾಣದಲ್ಲಿ ಹಣ ಪೀಕುತ್ತಿದ್ದಾರೆ. ಇದು ಪಂಚಖಾತ್ರಿಗಳ ಲಾಭಕ್ಕಿಂತಲೂ ದೊಡ್ಡದಾದ ಜನಾಕ್ರೋಶವನ್ನು ಸೃಷ್ಟಿಸಿದೆ.

ಜೊತೆಗೆ ಮತ್ತೊಂದು ಎಡವಟ್ಟು ಎಂಬಂತೆ ಬಿ ಖಾತಾದಿಂದ ಎ ಖಾತಾ ಪರಿವರ್ತನೆಯ ಹೆಸರಿನಲ್ಲಿ ಆಸ್ತಿಯ ಮೌಲ್ಯದ ಶೇ. 5ರಷ್ಟು ಶುಲ್ಕ ವಸೂಲಿ ಮಾಡುತ್ತಿರುವುದು ನಾನಾ ರೀತಿಯ ವ್ಯಾಖ್ಯಾನಗಳಿಗೆ ಕಾರಣವಾಗಿದೆ.

ದಾಖಲಾತಿಗಳನ್ನು ಕ್ರಮಬದ್ಧಗೊಳಿಸಿಕೊಡುತ್ತೆವೆ ಎಂದು ಡಿ.ಕೆ.ಶಿವಕುಮಾರ್ ಹೇಳುತ್ತಿದ್ದಾರೆ. ಆದರೆ ಇದು ಅಕ್ರಮ ಸಕ್ರಮವಲ್ಲ ಎಂಬ ಸ್ಪಷ್ಟನೆಯನ್ನು ನೀಡಲಾಗುತ್ತಿದೆ. ಎ ಖಾತಾವಾದರೂ ಅದು ಸಕ್ರಮವೆಂದು ಪರಿಗಣಿಸುವುದಿಲ್ಲ ಎಂದಾದರೆ ಶೇ.5ರಷ್ಟು ಹಣ ಕಟ್ಟಿಸಿಕೊಳ್ಳುವುದು ಏಕೆ ಎಂಬ ಪ್ರಶ್ನೆಗಳು ಎದ್ದಿವೆ.

ಸರ್ಕಾರ ಆಯ್ದ ಜನರಿಗೆ ಪಂಚಖಾತ್ರಿಗಳನ್ನು ಕೊಟ್ಟು ಅದಕ್ಕೆ ಪ್ರತಿಯಾಗಿ ಪ್ರತಿಯೊಬ್ಬರಿಂದಲೂ ದುಪ್ಪಟ್ಟು ಹಣ ಸುಲಿಗೆ ಮಾಡುತ್ತಿದೆ ಎಂಬ ಟೀಕೆಗಳಿವೆ. ಗುತ್ತಿಗೆದಾರರ ಸಂಘದವರು ಕೂಡ ಆರೋಪಗಳನ್ನು ಮಾಡಿ, ಕಾಂಗ್ರೆಸ್ ಸರ್ಕಾರದಲ್ಲೂ ಕಮಿಷನ್ ದಂಧೆ ನಡೆಯುತ್ತಿದೆ ಎಂದಿದ್ದಾರೆ.

ಆಡಳಿತಾರೂಢ ಕಾಂಗ್ರೆಸ್ ಸರ್ಕಾರಕ್ಕೆ ಗ್ರೇಟರ್ ಬೆಂಗಳೂರು ಪಾಲಿಕೆಗಳ ಚುನಾವಣೆ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣೆಗಳು ಪ್ರತಿಷ್ಠೆಯ ಪ್ರಶ್ನೆಯಾಗಿವೆ. ಆದರೆ ದರಗಳ ಏರಿಕೆ, ಹಲವಾರು ಗೊಂದಲಕಾರಿ ನೀತಿಗಳು ಕಾಂಗ್ರೆಸ್? ಸರ್ಕಾರಕ್ಕೆ ಜನ ಹಿಡಿ ಶಾಪ ಹಾಕುವಂತಹ ವಾತಾವರಣ ನಿರ್ಮಿಸಿದೆ.

ಚುನಾವಣೆ ದೃಷ್ಟಿಯಲ್ಲಿಟ್ಟುಕೊಂಡು ಈ ಎಲ್ಲಾ ಜನವಿರೋಧಿ ನಿಲುವುಗಳಿಂದ ಸಾರ್ವಜನಿಕರ ಗಮನವನ್ನು ಬೇರೆಡೆ ಸೆಳೆಯಲು ಆರ್‌ಎಸ್‌ಎಸ್ ವಿವಾದದ ಅಸ್ತ್ರವನ್ನು ಬಳಕೆ ಮಾಡಿಕೊಳ್ಳಲಾಗಿದೆ ಎಂಬ ಟೀಕೆಗಳಿವೆ. ಸದ್ಯಕ್ಕೆ ಕರ್ನಾಟಕದಲ್ಲಿ ಶಾಂತಿ ಸುವ್ಯವಸ್ಥೆ ಸುಸ್ಥಿತಿಯಲ್ಲಿತ್ತು. ಈ ಹಂತದಲ್ಲಿ ಸಚಿವರಾದ ಪ್ರಿಯಾಂಕ ಖರ್ಗೆ ಪತ್ರ ಬರೆದು, ಸರ್ಕಾರಿ ಜಾಗಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿಷೇಧಿಸುವಂತೆ ಶಿಫಾರಸು ಮಾಡುವ ಅಗತ್ಯವೇನಿತ್ತು ಅದರ ಬೆನ್ನಲ್ಲೆ ಈ ಹಿಂದೆ ಜಗದೀಶ್‌ಶೆಟ್ಟರ್ ಅವರ ಸರ್ಕಾರದ ಸುತ್ತೋಲೆಯೊಂದನ್ನು ಬಳಕೆ ಮಾಡಿಕೊಂಡು ಕಾಂಗ್ರೆಸ್ ಸರ್ಕಾರ ತನ್ನ ಕ್ರಮವನ್ನು ಸಮರ್ಥಿಸಿಕೊಂಡಿದ್ದು, ಈ ಎಲ್ಲಾ ಪ್ರಯತ್ನಗಳು ವ್ಯವಸ್ಥಿತ ಎಂಬಂತೆ ಕಂಡು ಬರುತ್ತಿವೆ.ಪ್ರಿಯಾಂಕ್ ಖರ್ಗೆ ಅವರ ಪತ್ರ ಆಧರಿಸಿ, ರಾಜ್ಯ ಸರ್ಕಾರ ಸಂಪುಟದಲ್ಲಿ ನಿರ್ಣಯ ಕೈಗೊಂಡು ಆರ್‌ಎಸ್‌ಎಸ್ ಮಾತ್ರವ ಲ್ಲದೇ ಎಲ್ಲಾ ಖಾಸಗಿ ಸಂಘ ಸಂಸ್ಥೆಗಳ ಚಟುವಟಿಕೆಗಳನ್ನು ಸರ್ಕಾರಿ ಸ್ವತ್ತುಗಳಲ್ಲಿ ನಿರ್ಬಂಧಿಸುವ ಪ್ರಯತ್ನ ಮಾಡಿತ್ತು.

# ತಾಕತ್ತಿದ್ದರೆ ಆರ್‌ಎಸ್‌ಎಸ್ ನಿಷೇಧ ಮಾಡಿ : ಸರ್ಕಾರಕ್ಕೆ ಆರ್.ಆಶೋಕ್ ಓಪನ್ ಚಾಲೆಂಜ್

**ಬೆಂಗಳೂರು,ಅ.29–** ಆರ್ ಎಸ್‌ಎಸ್ ಗೆ ಕಡಿವಾಣ ಹಾಕುವ ವ್ಯರ್ಥ ಪ್ರಯತ್ನ ಬಿಟ್ಟು, ತಾಕತ್ತಿದ್ದರೆ ಇದನ್ನು ನಿಷೇಧ ಮಾಡಿ ನೋಡೋಣ ಎಂದು ರಾಜ್ಯ ಸರ್ಕಾರಕ್ಕೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಆಶೋಕ್ ಬಹಿರಂಗ ಸವಾಲು ಹಾಕಿದ್ದಾರೆ.

ತಮ್ಮ ಸಾಮಾಜಿಕ ಜಾಲ ತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿ, ರಾಜ್ಯ ಸರ್ಕಾರದ ವಿರುದ್ದ ವಾಗ್ದಳಿ ನಡೆಸಿರುವ ಅವರು, ಹಿಟ್ಲರ್ ಕಾಂಗ್ರೆಸ್ ಸರ್ಕಾರಕ್ಕೆ ಹೈಕೋರ್ಟ್ ಛಡಿಯೇಟು ಕೊಟ್ಟಿದ್ದು, ಈ ರೀತಿ ಹಿಂಬಾಗಿಲಿನಿಂದ ಆರ್ ಎಸ್ ಎಸ್ ಚಟುವಟಿಕೆಗಳಿಗೆ ನಿರ್ಬಂಧ ಹಾಕಲು ಆಗುವುದಿಲ್ಲ. ಅಲ್ಲದೆ, ಈ ಹಿಟ್ಲರ್ ಆಟ ಜಾಸ್ತಿ ದಿನ ನಡೆಯುವುದಿಲ್ಲ ಸ್ವಾಮಿ ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

ಆರ್ ಎಸ್ ಎಸ್ ಪಥಸಂಚನಲಕ್ಕೆ ಅವಕಾಶ ನೀಡದಿರುವ ಕಾಂಗ್ರೆಸ್ ಸರ್ಕಾರದ ನಿರಂಕುಶವಾದಿ ನಡೆಗೆ ಮಾನ್ಯ ಹೈಕೋರ್ಟ್ ಛೀಮಾರಿ ಹಾಕಿದ್ದು, ಸಂವಿಧಾನದತ್ತ ಮೂಲಭೂತ ಹಕ್ಕುಗಳ ಉಲ್ಲಂಘನೆ ಆಗುತ್ತದೆ ಎಂದು ಸ್ಪಷ್ಟವಾಗಿ ಹೇಳಿದೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಪ್ರಿಯಾಂಕ ಖರ್ಗೆ ಅವರೇ, ನಿಮ್ಮ ಪರಮೋಚ್ಚ ನಾಯಕ ರಾಹುಲ್ ಗಾಂಧಿ ಅವರು ಸದಾ ಜೇಬಿನಲ್ಲಿಟ್ಟುಕೊಂಡು ಓಡಾಡುವ ಸಂವಿಧಾನ ಪುಸ್ತಕದಲ್ಲಿ ನಾಗರೀಕರ ಮೂಲಭೂತ ಹಕ್ಕುಗಳಿಗೆ ಸ್ಥಾನ ಇಲ್ಲವೇ? ಎಂದು ಪ್ರಶ್ನೆ ಮಾಡಿದ್ದಾರೆ.



ಮತ್ತೊಂದು ಪೋಸ್ಟ್ ನಲ್ಲಿ ಒಂದೇ ಒಂದು ರಸ್ತೆ ಗುಂಡಿ ಮುಚ್ಚಲು ದುಡ್ಡಿಲ್ಲ. ಪಾಲಿಕೆ ಶಾಲೆಗಳ ಶಿಕ್ಷಕರಿಗೆ 6 ತಿಂಗಳಿಂದ ವೇತನ ಕೊಟ್ಟಿಲ್ಲ. 8 ತಿಂಗಳಿಂದ ಸ್ಮಶಾನ ಸಿಬ್ಬಂದಿಗೆ ಸಂಬಳವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ವಾಮಿ ಡಿಸಿಎಂ ಡಿ.ಕೆ ಶಿವಕುಮಾರ್ ಅವರೇ, ಬೆಂಗಳೂರಿನ ಜನ ಪಾಲಿಕೆಗೆ ಕಟ್ಟುತ್ತಿರುವ ಸಾವಿರಾರು ಕೋಟಿ ತೆರಿಗೆ ಹಣ ಎಲ್ಲಿ ಸ್ವಾಮಿ? ಜನರ ತೆರಿಗೆ ಹಣ ಯಾರ ಜೇಬು ಸೇರುತ್ತಿದೆ? ಇದರ ಮೇಲೆ ಈಗ ಎ–ಖಾತಾ ಪರಿವರ್ತನೆ ನೆಪದಲ್ಲಿ ಮತ್ತೊಮ್ಮೆ ಜನ ಸಾಮಾನ್ಯರಿಂದ ಲಕ್ಷಾಂತರ ರೂಪಾಯಿ ಸುಲಿಗೆ ಮಾಡಲು ಇಳಿದಿದ್ದೀರಿ.

ಬ್ರ್ಯಾಂಡ್ ಬೆಂಗಳೂರು ಮಾಡ್ತೀನಿ ಅಂತ ಬೆಂಗಳೂರನ್ನ ಬರ್ಬಾದ್ ಮಾಡಿಬಿಟ್ಟರಲ್ಲ ಸ್ವಾಮಿ. ಜನ ನಿಮ್ಮನ್ನ ಖಂಡಿತ ಕ್ಷಮಿಸುವುದಿಲ್ಲ ಎಂದು ಆಶೋಕ್ ಸರ್ಕಾರ ವಿರುದ್ದ ಕಿಡಿಕಾರಿದ್ದಾರೆ

# ನಾಳೆ ಟೇಬಲ್ ಟೆನ್ನಿಸ್ ಪಂದ್ಯಾವಳಿ ಉದ್ಘಾಟನಾ ಕಾರ್ಯಕ್ರಮ

**ಬೀದರ್,:ಅ.29–** ನಗರದ ಶಾಹಿನ್ ನಗರ ಶಾಹಪೂರ ಗೇಟ್ ಸಮೀಪದ ಅಲ್ಲಮಾ ಇಕ್ಬಾಲ್ ಪದವಿ ಪೂರ್ವ ಕಾಲೇಜಿನಲ್ಲಿ ಗುರುವಾರ ಬೆಳಿಗ್ಗೆ 9.30 ಗಂಟೆಗೆ ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಬೀದರ್ ಸಹಯೋಗದಲ್ಲಿ 2025–26ನೇ ಸಾಲಿನ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ಟೇಬಲ್ ಟೆನ್ನಿಸ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭ ಜರುಗಲಿದೆ ಎಂದು ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಉಪನಿರ್ದೇಶಕ ಚಂದ್ರಕಾಂತ ಶಾಹಾಬಾದಕರ್ ತಿಳಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಪಂದ್ಯಾವಳಿ ಉದ್ಘಾಟಿಸಲಿದ್ದಾರೆ. ಪೌರಾಡಳಿತ ಸಚಿವ ರಹೀಂಖಾನ್ ಅಧ್ಯಕ್ಷತೆ ವಹಿಸುವರು. ಸಂಸದ ಸಾಗರ ಖಂಡ್ರೆ, ಶಾಸಕರಾದ ಪ್ರಭು ಚವ್ಹಾಣ, ಶರಣು ಸಲಗರ, ಡಾ.ಶೈಲೇಂದ್ರ ಬೆಲ್ದಾಳೆ, ಡಾ.ಸಿದ್ದಲಿಂಗಪ್ಪ ಪಾಟೀಲ್, ಡಾ.ಚಂದ್ರಶೇಖರ ಪಾಟೀಲ್, ಶಶೀಲ ನಮೋಶಿ, ಭೀಮರಾವ ಪಾಟೀಲ್, ಎಂ.ಜಿ.ಮುಳೆ, ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ನಾರಾಯಣರಾವ, ಕಾಡಾ ಅಧ್ಯಕ್ಷ ಬಾಬು ಹೊನ್ನಾ ನಾಯಕ, ನಗರ ಸಭೆ ಅಧ್ಯಕ್ಷ ಮಹ್ಮದ ಗೌಸ್, ಬುಡಾ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೋಡೆ, ಶಾಹಿನ್ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಅಬ್ದುಲ್ ಖಾದೀರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.



ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಪಂ ಸಿಇಓ ಡಾ.ಗಿರೀಶ ಬದೋಲೆ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ವಿಶೇಷ ಆಹ್ವಾನಿತರಾಗಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಫೇಲ್ ಯುದ್ಧ ವಿಮಾನದಲ್ಲಿ ಮುರ್ಮು ಹಾರಾಟ



**ನವದೆಹಲಿ,ಅ.29–**ರಾಷ್ಟ್ರಪತಿ ದ್ರೌಪದಿ ಮುರ್ಮು ಬುಧವಾರ ಬೆಳಿಗ್ಗೆ ಹರಿಯಾಣದ ಅಂಬಾಲಾ ವಾಯುಪಡೆ ನಿಲ್ದಾಣದಿಂದ ರಫೇಲ್ ವಿಮಾನದಲ್ಲಿ ಹಾರಾಟ ನಡೆಸಿದ್ದಾರೆ .

ರಫೇಲ್ ವಿಮಾನ ಹತ್ತುವುದಕ್ಕೆ ಮುನ್ನ ರಾಷ್ಟ್ರಪತಿಗಳು ಜಿ–ಸೂಟ್ ಧರಿಸಿದ್ದರು. ಹೆಲ್ಮೆಟ್ ಹಿಡಿದು ಸನ್ ಗ್ಲಾಸ್ ಧರಿಸಿ, ಮುರ್ಮು ಪೈಲಟ್ ಜೊತೆ ಛಾಯಾಚಿತ್ರಗಳಿಗೆ ಪೋಸ್ ನೀಡಿದ್ದಾರೆ. ಬೆಳಿಗ್ಗೆ 11.27 ಕ್ಕೆ ವಿಮಾನ ಹಾರುವ ಮೊದಲು, ರಾಷ್ಟ್ರಪತಿಗಳು ವಿಮಾನದ ಒಳಗಿನಿಂದ ಕೈ ಬೀಸಿದರು. ಇಂದು ಬೆಳಿಗ್ಗೆ ವಾಯುಪಡೆ ನಿಲ್ದಾಣಕ್ಕೆ ಆಗಮಿಸಿದಾಗ, ರಾಷ್ಟ್ರಪತಿಗಳಿಗೆ ಗೌರವ ವಂದನೆ ಸಲ್ಲಿಸಲಾಗಿದೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಫೇಲ್‌ನ ವಿಶೇಷತೆಗಳ ಬಗ್ಗೆ ವಾಯುಪಡೆಯ ಅಧಿಕಾರಿಗಳಿಂದ ಮಾಹಿತಿ ಪಡೆದರು. ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎಪಿ ಸಿಂಗ್ ಸೇರಿದಂತೆ ಅನೇಕ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು. ರಾಷ್ಟ್ರಪತಿ ಮುರ್ಮು ವಾಯುಪಡೆಯ ಸಮವಸ್ತ್ರದಲ್ಲಿ ರಫೇಲ್‌ನಲ್ಲಿ ಹಾರಾಟ ನಡೆಸಿದ್ದಾರೆ. ರಾಷ್ಟ್ರಪತಿಗಳು ರಫೇಲ್‌ನಲ್ಲಿ ಹಾರಾಟ ನಡೆಸಿದ್ದು ಇದೇ ಮೊದಲು. ಅವರ ಈ ನಡೆ ಸೇನೆಯ ಮನೋಸ್ಥೈರ್ಯವನ್ನು ಹೆಚ್ಚಿಸುತ್ತದೆ ಎಂದು ಹೇಳಲಾಗುತ್ತಿದೆ. ಹಾರಾಟದ ಸಮಯದಲ್ಲಿ, ಅಧ್ಯಕ್ಷ ಮುರ್ಮು ಅವರು ತಮ್ಮ ಕೈ ಬೀಸುವ ಮೂಲಕ ಹಾಜರಿದ್ದ ಜನರನ್ನು ಸ್ವಾಗತಿಸಿದ್ದಾರೆ.

ಇದಕ್ಕೂ ಮೊದಲು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರುಏಪ್ರಿಲ್ 8, 2023 ರಂದು ಅಸ್ಸಾಂನ ತೇಜ್‌ಪುರ ವಾಯುಪಡೆ ನಿಲ್ದಾಣದಿಂದ ಸುಖೋಯ್–30 ಎಂಕೆಐ ಯುದ್ಧ ವಿಮಾನವನ್ನು ಹಾರಿಸಿದ್ದಾರೆ, ಈ ಮೂಲಕ ದೇಶದ ಮೂರನೇ ರಾಷ್ಟ್ರಪತಿಯಾದರು. ಮಾಜಿ ರಾಷ್ಟ್ರಪತಿಗಳಾದ ಎ.ಪಿ.ಜೆ. ಅಬ್ದುಲ್ ಕಲಾಂ ಮತ್ತು ಪ್ರತಿಭಾ ಪಾಟೀಲ್ ಅವರು ಕ್ರಮವಾಗಿ ಜೂನ್ 8, 2006 ಮತ್ತು ನವೆಂಬರ್ 25, 2009 ರಂದು ಪುಣೆ ಬಳಿಯ ಲೋಹೆಗಾಂವ್ ವಾಯುಪಡೆ ನಿಲ್ದಾಣದಿಂದ ಸುಖೋಯ್–30 ಎಂಕೆಐ ಯುದ್ಧ ವಿಮಾನವನ್ನು ಹಾರಿಸಿದರು.

ಈ ನಡೆ ಸೇನೆಗೆ ಮನೋಸ್ಥೈರ್ಯ ಹೆಚ್ಚಿಸುವಂತಿದ್ದು, ಭಾರತೀಯ ವಾಯುಪಡೆಯ ಸಾಮರ್ಥ್ಯದ ಸಂದೇಶವನ್ನು ರವಾನಿಸುತ್ತದೆ. ಇದು ಮಹಿಳಾ ಸಬಲೀಕರಣವನ್ನೂ ಸೂಚಿಸುತ್ತದೆ.

ಫ್ರೆಂಚ್ ಏರೋಸ್ಪೇಸ್ ಕಂಪನಿಯಿಂದ ತಯಾರಿಸಲ್ಪಟ್ಟ ರಫೇಲ್ ಯುದ್ಧ ವಿಮಾನಗಳನ್ನು ಸೆಪ್ಟೆಂಬರ್ 2020 ರಲ್ಲಿ ಅಂಬಾಲಾ ವಾಯುಪಡೆ ನಿಲ್ದಾಣದಲ್ಲಿ ಭಾರತೀಯ ವಾಯುಪಡೆಗೆ ಔಪಚಾರಿಕವಾಗಿ ಸೇರಿಸಲಾಯಿತು. ಮೊದಲ ಐದು ರಫೇಲ್ ಜೆಟ್‌ಗಳನ್ನು 17 ನೇ ಸ್ಕ್ವಾಡ್ರನ್, ಗೋಲ್ಡನ್ ಆರೋಸ್‌ಗೆ ಸೇರಿಸಲಾಗಿದೆ.

ಈ ವಿಮಾನಗಳು ಜುಲೈ 27, 2020 ರಂದು ಫ್ರಾನ್ಸ್‌ನಿಂದ ಬಂದವು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಆಪರೇಷನ್ ಸಿಂದೂರ್ ಅನ್ನು ನಡೆಸುವಲ್ಲಿ ರಫೇಲ್ ಯುದ್ಧ ವಿಮಾನಗಳು ಪ್ರಮುಖ ಪಾತ್ರ ವಹಿಸಿದವು.

# ಆರೋಪಿಗಳಿಗೆ ಬಂಧಿಸದಿದ್ದರೆ ಸಾಮೂಹಿಕ ಆತ್ಮಹತ್ಯೆ: ಸುಶಿಲಾಬಾಯಿ



**ಬೀದರ:ಅ.29–** ಅಕ್ಟೋಬರ್ 21 ರಂದು ಸಾಯಂಕಾಲ ಭಾಲ್ಕಿ ತಾಲೂಕಿನ ಕಣಜಿ ಗ್ರಾಮದ ಟೋಕರೆ ಕೋಳಿ ಕಬ್ಬಲಿಗ ಸಮಾಜದ ಸುಶೀಲಾಬಾಯಿ ಎನ್ನುವ ಮಹಿಳೆಯೊಬ್ಬಳನ್ನು ಅದೇ ಗ್ರಾಮದ ಪ್ರಕಾಶ ತಂದೆ ವಿಶ್ವನಾಥ, ನಾಗೇಶ ತಂದೆ ಪ್ರಕಾಶ ಹಾಗೂ ಕಾರ್ತಿಕ ತಂದೆ ಕಂಟಯ್ಯಾ ಎನ್ನುವವರು ಕೊಲೆಗೆ ಯತ್ನಿಸಿ, ಮಹಿಳೆಗೆ ಸಾರಾಯಿ ಕುಡಿಸಿ ಕೆರೆಯೊಳಗೆ ಎಸೆದಿದ್ದು ಖಂಡನೀಯ ಎಂದು ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿಯ ಕಲ್ಯಾಣ ಕರ್ನಾಟಕ ಮಹಿಳಾ ಘಟಕದ ಅಧ್ಯಕ್ಷೆ ಜೈಶ್ರೀ ಕಟ್ಟಿಮನಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಹಣದ ವ್ಯವಹಾರದ ವಿಷಯದಲ್ಲಿ ಮಹಿಳೆಗೆ ಅನ್ಯಾಯ ಮಾಡಲಾಗಿದೆ. ಜೊತೆಗೆ ಕೊಲೆಗೆ ಯತ್ನ ನಡೆದಿದೆ. ಈ ಎಲ್ಲಾ ವಿಷಯ ಧನ್ನೂರಾ ಎಚ್. ಪೊಲೀಸ್ ಠಾಣೆಯ ಪಿಎಸ್‌ಐ ಅವರಿಗೆ ಮಾಹಿತಿ ಇದೆ. ಸಂತ್ರಸ್ತೆ ಆಸ್ಪತ್ರೆಯಲ್ಲಿದ್ದಾಗ ಎಂಎಲ್‌ಸಿ ಕೂಡಾ ಅದೇ ದಿವಸ ರಾತ್ರಿ ಆಗಿದೆ. ಘಟನೆ ನಡೆದ 24 ಗಂಟೆಯೊಳಗೆ ಎಫ್‌ಐಆರ್ ಆಗಬೇಕು. ಆದರೆ ಏಳು ದಿವಸಗಳು ಕಳೆದರೂ ಇಂದಿಗೂ ಎಫ್‌ಐಆರ್ ಆಗದಿರುವುದು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ.

ಬಸವಾದಿ ಶರಣರು, ಸೂಫಿ ಸಂತರ ನಾಡಿನಲ್ಲಿ ಒಬ್ಬ ಮಹಿಳೆಗೆ ಇಷ್ಟೆಲ್ಲಾ ಅನ್ಯಾಯ ಆದರೂ, ಕೊಲೆ ಯತ್ನ ನಡೆದರೂ ನ್ಯಾಯ ಸಿಗದೇ ಇರುವುದು ವಿಷಾದನೀಯ. ಕೂಡಲೇ ಆರೋಪಿಗಳ ಮೇಲೆ ಜಾತಿನಿಂದನೆ ಕೇಸ್ ದಾಖಲಾಗಬೇಕು. ಆರೋಪಿಗಳ ಬಂಧನವಾಗಬೇಕು. ಇಲ್ಲದಿದ್ದರೆ ಎಸ್‌ಪಿಯವರಿಗೆ, ಐಜಿ ಕಲಬುರಗಿ ಯವರಿಗೆ ಹಾಗೂ ಮಹಿಳಾ ಆಯೋಗಕ್ಕೆ ದೂರ ಸಲ್ಲಿಸಲಾಗುವುದು ಎಂದು ಜೈಶ್ರೀ ತಿಳಿಸಿದರು.

ಹಲ್ಲೆಗೊಳಗಾದ ಟೋಕರೆ ಕೋಲಿ ಕಬ್ಬಲಿಗ ಸಮಾಜದ ಮಹಿಳೆ ಸುಶೀಲಾಬಾಯಿ ಮಾತನಾಡಿ ಅ. 21 ರಂದು ಈ ಮೇಲಿನ ಮೂವರಿಗೆ ಹಣದ ವ್ಯವಹಾರದ ವಿಷಯದಲ್ಲಿ ನನ್ನ ಬಂಗಾರ ಹಾಗೂ ಹಣ ನನಗೆ ವಾಪಸ್ ಕೊಡಿ ಎಂದು ಕೇಳಿದ್ದೆ. ಅದನ್ನೇ ಮನಸ್ಸಿನಲ್ಲಿಟ್ಟುಕೊಂಡು ಕೆರೆ ಕಡೆಗೆ ಬಹಿರ್ದೆಸೆಗೆ ಒಬ್ಬಳೇ ಹೋದಾಗ ನನ್ನ ಬಾಯಿ ಮುಚ್ಚಿ, ಪೊದೆಯೊಳಗೆ ಕರೆದುಕೊಂಡು ಹೋದರು. ಅಲ್ಲಿ ನನ್ನ ಬಾಯೊಳಗೆ ಸಾರಾಯಿ ಹಾಕಿ, ಈ ಮೂವರು ಕೆರೆಯೊಳಗೆ ಎಸೆದರು.

ಅಂದು ಕೆಲವು ಗ್ರಾಮಸ್ಥರು ಹಾಗೂ ಕುಟುಂಬಸ್ಥರು ಬಂದು ನನಗೆ ಕಾಪಾಡದಿದ್ದರೆ ನಾನು ಸಾಯುತಿದ್ದೆ. ಇಷ್ಟೆಲ್ಲಾ ಘಟನೆಗಳ ಬಗ್ಗೆ ಧನ್ನೂರಾ ಪೊಲೀಸರಿಗೆ ಮಾಹಿತಿ ಇದ್ದರೂ, ಅವರ ಮೇಲೆ ಇಂದಿಗೂ ಕೇಸ್ ದಾಖಲಿಸಲಿಲ್ಲ. ನನಗೆ ಅನ್ಯಾಯವಾಗಿದೆ. ಆರೋಪಿಗಳನ್ನು ಕೂಡಲೇ ಬಂಧಿಸಬೇಕು. ಇಲ್ಲದಿದ್ದರೆ ಧನ್ನೂರಾ ಪೊಲೀಸ್ ಠಾಣೆ ಮುಂದೆ ನಾನು ಹಾಗೂ ನನ್ನ ಕುಟುಂಬಸ್ಥರು ವಿಷ ಸೇವಿಸಿ ಸಾಮೂಹಿಕ ಆತ್ಮಹತ್ಯೆ ಮಾಡಿಕೊಳ್ಳುತ್ತೇವೆ ಎಂದು ಕಣ್ಣೀರಿಟ್ಟರು.

ಸಂತ್ರಸ್ತ ಮಹಿಳೆಯ ಮಗ ಹಣಮಂತ ಬಸವರಾಜ ಮಾತನಾಡಿ ಈ ಕುರಿತು ಧನ್ನೂರಾ ಪೊಲೀಸ್ ಠಾಣೆಯ ಪಿಎಸ್‌ಐ ಅವರಿಗೆ ಕೇಳಿದಾಗ ನೀನೇನು ನನಗೆ ಹಣ ಕೊಟ್ಟಿದ್ದಿಯಾ? ನೀನು ಹೇಳಿದ ಹಾಗೆ ಕೇಳಲು ನಾವೇನು ನಿಮ್ಮ ಆಳುಗಳಾ? ನಿನ್ನ ಮೇಲೆ ಹಳೆಯ ಕೇಸ್ ಇದೆ. ಆ ಫೈಲ್ ತೆಗೆದು ನಿನಗೆ ಒಳಗೆ ಹಾಕ್ತಿನಿ ಎಂದು ಧಮ್ಕಿ ಹಾಕುತ್ತಿದ್ದಾರೆ. ನಮ್ಮ ತಾಯಿ ನ್ಯಾಯ ಒದಗಿಸಿಕೊಡದಿದ್ದರೆ ಸಾಮೂಹಿಕ ಆತ್ಮಹತ್ಯೆ ಮಾಡಿಕೊಳ್ಳುತ್ತೇವೆ ಎಂದರು.

ಇದೇ ವೇಳೆ ಸುದ್ದಿಗೋಷ್ಠಿಯಲ್ಲಿ ಕೋಲಿ ಕಬ್ಬಲಿಗ ಎಸ್‌ಟಿ ಹೋರಾಟ ಸಮಿತಿಯ ಬೀದರ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಇಂದುಬಾಯಿ ರವೀಂದ್ರ, ಸಂತ್ರಸ್ತೆಯ ಸೊಸೆ ಸುರೇಖಾ ಹಣಮಂತ ಉಪಸ್ಥಿತರಿದ್ದರು.

# ಆನೇಕಲ್ ಬಳಿ ಅಚ್ಚರಿ ಮೂಡಿಸಿದ ದೇಶದ್ರೋಹಿಗಳ 'ಪಾಕಿಸ್ತಾನ್ ಜಿಂದಾಬಾದ್' ವೈಫೈ ಐಡಿ

ಬೆಂಗಳೂರು, ಅ.29– ಆನೇಕಲ್ ತಾಲ್ಲೂಕಿನ ಜಿಗಣಿಯ ಸಮೀಪದ ಗ್ರಾಮವೊಂದರಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂಬ ವೈಫೈ ಯೂಸರ್ ಐಡಿ (ಎಸ್‌ಎಸ್‌ಐಡಿ) ಪತ್ತೆಯಾಗುವ ಮೂಲಕ ಆಘಾತ ಮೂಡಿಸಿದೆ.

ಜಿಗಣಿಯ ಬಳಿ ಕಲ್ಲುಬಾಳು ಗ್ರಾಮದಲ್ಲಿ ವೈಫೈ ಸಂಪರ್ಕಗಳನ್ನು ಹುಡುಕಿದಾಗ ಯಾಂತ್ರಿಕವಾಗಿ ಕಂಡು ಬರುವ ಹೆಸರುಗಳಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂಬ ಹೆಸರಿನ ಸಂಪರ್ಕವೂ ಪತ್ತೆಯಾಗಿದೆ.

ಈ ಯೂಸರ್ ಐಡಿ ಪಾಸ್‌ವರ್ಡ್ ಸಂರಕ್ಷಿತವಾಗಿದ್ದು, ಸಕ್ರಿಯವಾಗಿತ್ತು. ಇದನ್ನು ಕಂಡು ಗ್ರಾಮಸ್ಥರು ಬೆಚ್ಚಿ ಬಿದ್ದಿದ್ದಾರೆ. ವೈಫೈ ಸಂಪರ್ಕ ಪಡೆದವರು ಸಹಜವಾಗಿ ತಮಗೆ ಇಷ್ಟವಾಗುವ ಹೆಸರಿನಲ್ಲಿ ಬಳಕೆದಾರರ ಶೀರ್ಷಿಕೆ (ಎಸ್‌ಎಸ್‌ಐಡಿ) ಇಟ್ಟುಕೊಳ್ಳುತ್ತಾರೆ. ಆದರೆ ಕಲ್ಲುಬಾಳು ಗ್ರಾಮದಲ್ಲಿ ಇಂಟರ್‌ನೆಟ್ ಸಂಪರ್ಕ ಪಡೆದ ವ್ಯಕ್ತಿಯೊಬ್ಬರು ತಮ ವೈಫೈಗೆ ಪಾಕಿಸ್ತಾನ್ ಜಿಂದಾಬಾದ್ ಎಂಬ ಸರ್ವೀಸ್ ಸೆಟ್ ಐಡೆಂಟಿಫೈಯರ್‌ಶೀರ್ಷಿಕೆ ಇಟ್ಟುಕೊಂಡಿರುವುದು ಅಚ್ಚರಿ ಮೂಡಿಸಿದೆ.

ಸಾಮಾನ್ಯವಾಗಿ ಬಳಕೆದಾರರ ಶೀರ್ಷಿಕೆಯನ್ನು ತಮಗೆ ಇಷ್ಟವಾದಂಥ ಹೆಸರಿನಲ್ಲಿ ನಮೂದಿಸಿಕೊಳ್ಳುವುದು ಸಾಮಾನ್ಯ. ಆದರೆ ಕಲ್ಲುಬಾಳು ಗ್ರಾಮದ ಸರ್ಕಾರಿ ಶಾಲೆಯ ಬಳಿಯ ಸಂಪರ್ಕದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂದು ನಮೂದಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೂ ಕಾರಣವಾಗಿದೆ.

6–7 ತಿಂಗಳ ಹಿಂದೆ ಜಿಗಣಿ ಪೊಲೀಸ್ ಠಾಣೆಯಲ್ಲಿ ಬಾಂಗ್ಲದೇಶ, ಪಾಕಿಸ್ತಾನದ ಪ್ರಜೆಗಳನ್ನು ಪತ್ತೆ ಹಚ್ಚಿ ಪೊಲೀಸರು ಕ್ರಮ ಕೈಗೊಂಡಿದ್ದರು. ಈಗ ದೇಶವಿರೋಧಿ ನಡವಳಿಕೆ ಎಂಬಂತೆ ವೈಫೈಗೆ ನೆರೆ ರಾಷ್ಟ್ರದ ಪರ ಘೋಷಣೆ ಕೂಗುವ ಶೀರ್ಷಿಕೆಯನ್ನಿಟ್ಟಿರುವುದು ಹಲವು ಅನುಮಾನಗಳನ್ನು ಹುಟ್ಟಿಸಿದೆ. ಇಲ್ಲಿ ಭಯೋತ್ಪಾದಕರು ನೆಲೆಸಿ ತಮ ಚಟುವಟಿಕೆಗಳನ್ನು ನಡೆಸುತ್ತಿದ್ದಾರೆಯೇ ಎಂಬ ಅನುಮಾನ ಕಾಡಲಾರಂಭಿಸಿದೆ.




ಸ್ಥಳೀಯರ ಮಾಹಿತಿ ಆಧರಿಸಿ ಭಜರಂಗ ದಳದ ಕಾರ್ಯಕರ್ತರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿದ್ದು, ನಂತರ ಪೊಲೀಸರಿಗೆ ದೂರು ನೀಡಿದ್ದಾರೆ. ಸ್ಥಳಕ್ಕಾಗಮಿಸಿದ ಪೊಲೀಸರು ಸುತ್ತಮುತ್ತಲ ಪ್ರದೇಶಗಳಲ್ಲಿ ಪರಿಶೀಲನೆ ನಡೆಸಿದ್ದಾರೆ. ಆದರೆ ನಿಖರವಾದ ಸಂಪರ್ಕದ ಮಾಹಿತಿ ಸಿಗದ ಹಿನ್ನೆಲೆಯಲ್ಲಿ ಬರಿಗೈಯಲ್ಲೆ ತೆರಳಿದ್ದು, ಸಂಜೆಯ ವೇಳೆಗೆ ಭಜರಂಗ ದಳದ ಕಾರ್ಯಕರ್ತ ಗೋವರ್ಧನ್ ಅವರಿಂದ ದೂರು ಪಡೆದು ಎನ್‌ಸಿಆರ್ ದಾಖಲಿಸಿದ್ದಾರೆ.

ಪಾಕಿಸ್ತಾನ್ ಜಿಂದಾಬಾದ್ ಎಸ್‌ಎಸ್‌ಐಡಿ ಹೊಂದಿರುವ ಸಂಪರ್ಕವನ್ನು ಪತ್ತೆ ಹಚ್ಚಲು ತಜ್ಞರ ತಂಡ ನೆರವು ಪಡೆಯುತ್ತಿದ್ದಾರೆ. ಜೊತೆಗೆ ಆ ಭಾಗದಲ್ಲಿ ಇಂಟರ್‌ನೆಟ್ ಸೇವೆ ಒದಗಿಸುತ್ತಿರುವ ಕಂಪನಿಗಳನ್ನು ಸಂಪರ್ಕಿಸಿದ್ದಾರೆ. ಸಾಮಾನ್ಯವಾಗಿ ಎಸ್‌ಎಸ್‌ಐಡಿಯನ್ನು ರೂಪಿಸಿಕೊಂಡಿರುವ ಬಳಕೆದಾರರು ಪದೇ ಪದೇ ಅದನ್ನು ಬದಲಾಯಿಸುವ ಸಾಧ್ಯತೆಯಿದೆ.

ಪಾಕಿಸ್ತಾನ್ ಜಿಂದಾಬಾದ್ ಎಂಬ ಎಸ್‌ಎಸ್‌ಐಡಿಯನ್ನು ಯಾವ ಕಾರಣಕ್ಕೆ ಬಳಕೆ ಮಾಡುತ್ತಿದ್ದರು ಎಂಬುದನ್ನು ಪತ್ತೆ ಹಚ್ಚಿ ನಂತರ ಮುಂದಿನ ಕ್ರಮ ಜರುಗಿಸುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಖಾಸಗಿ ಬಸ್‌ಗಳಲ್ಲಿ ಬಲ್ಕ್ ಮೊಬೈಲ್ ಸಾಗಾಟಕ್ಕೆ ಬ್ರೇಕ್

**ಬೆಂಗಳೂರು, ಅ.29–** ಇನ್ನು ಮುಂದೆ ಖಾಸಗಿ ಬಸ್‌ಗಳಲ್ಲಿ ಬಲ್ಕ್ ಮೊಬೈಲ್ ಸಾಗಾಟಕ್ಕೆ ನಿಷೇಧ ಹೇರಲಾಗಿದೆ.ಕರ್ನೂಲ್ ಬಳಿ ಸಂಭವಿಸಿದ ಖಾಸಗಿ ಬಸ್ ಅಪಘಾತದಲ್ಲಿ 20 ಮಂದಿ ಪ್ರಯಾಣಿಕರು ಜೀವಂತ ದಹನವಾದ ಘಟನೆ ನಡೆದ ಎಚ್ಚೆತ್ತುಕೊಂಡಿರುವ ಸಾರಿಗೆ ಇಲಾಖೆ ಇಂತಹ ಮಹತ್ವದ ತೀರ್ಮಾನ ಕೈಗೊಂಡಿದೆ.

ಕರ್ನೂಲ್ ಪ್ರಕರಣದ ನಂತರ ಖಾಸಗಿ ಬಸ್‌ಗಳಲ್ಲಿ ಬಲ್ ಮೊಬೈಲ್‌ಫೋನ್‌ಗಳ ಸಾಗಾಟಕ್ಕೆ ನಿಷೇಧ ಹೇರಲಾಗಿದೆ ಎಂದು ಸಾರಿಗೆ ಇಲಾಖೆ ಹೆಚ್ಚುವರಿ ಆಯುಕ್ತೆ ಓಂಕಾರೇಶ್ವರಿ ತಿಳಿಸಿದ್ದಾರೆ. ಕರ್ನೂಲ್ ಬಳಿ ಸಂಭವಿಸಿದ ಅವಘಡದಲ್ಲಿ 20 ಅಮಾಯಕರು ಸಜೀವ ದಹನವಾಗಲು ಆ ಬಸ್‌ನಲ್ಲಿ ಸಾಗಿಸಲಾಗುತ್ತಿದ್ದ 100 ಕ್ಕೂ ಹೆಚ್ಚು ಮೊಬೈಲ್‌ಗಳ ಸ್ಫೋಟವೇ ಕಾರಣ ಎನ್ನುವುದು ತನಿಖೆಯಿಂದ ಪತ್ತೆಯಾದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಬಸ್ ಗೆ ಬೆಂಕಿ ಹೊತ್ತಿಕೊಂಡ ಸಂದರ್ಭದಲ್ಲೆ ರಾಶಿ ರಾಶಿ ಮೊಬೈಲ್‌ಗಳು ಸ್ಫೋಟಗೊಂಡಿದ್ದವು. ಭವಿಷ್ಯದಲ್ಲಿ ಇಂತಹ ಘಟನೆಗಳು ಪುನರಾವರ್ತನೆಯಾಗಬಾರದು ಎಂಬ ಉದ್ದೇಶದಿಂದ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು.

ಇದರ ಜೊತೆಗೆ ಪ್ರತಿ ಕ್ಯಾಬಿನ್‌ಗೆ ಫೈರ್ ಅಲರ್ಟ್ ಅಳವಡಿಸುವುದು, ಬೆಂಕಿ ಹತ್ತಿಕೊಳ್ಳದ ಕರ್ಟನ್ ಬಳಕೆ ಮಾಡುವಂತೆಯೂ ಖಾಸಗಿ ಬಸ್ ಮಾಲೀಕರಿಗೆ ಸೂಚನೆ ನೀಡಲಾಗಿದೆ ಎಂದು ಅವರು ತಿಳಿಸಿದರು.

ಯುವ ಮಾರ್ಗ

ಗುರುವಾರ 30-10-2025

# ವಿಕಲಚೇತನರ ಸಮಸ್ಯೆಗಳ ಆಲಿಕೆ: ತಾಲೂಕು ಮಟ್ಟದ ಸಭೆ ಕರೆಯಲು ಒತ್ತಾಯ

ಯುವ ಮಾರ್ಗ ಸುದ್ದಿ



**ಮಾನ್ವಿ,ಅ.29–**ತಾಲೂಕಿನಲ್ಲಿರುವ ವಿಕಲಚೇತನರು (ವಿಕಲಚೇತನರು) ಮತ್ತು ಅವರ ಪೋಷಕರು ಎದುರಿಸುತ್ತಿರುವ ಶೈಕ್ಷಣಿಕ, ಆರ್ಥಿಕ, ಆರೋಗ್ಯ, ಸಾಮಾಜಿಕ ಭದ್ರತೆ ಮತ್ತು ಪುನರ್ವಸತಿ ಸಂಬಂಧಿತ ಹಲವಾರು ಸಮಸ್ಯೆಗಳ ಕುರಿತು ಗಮನ ಸೆಳೆಯಲಾಗಿದೆ. ಈ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಕೂಡಲೇ ತಾಲೂಕು ಮಟ್ಟದ ವಿಕಲಚೇತನರ ಕುಂದು ಕೊರತೆಗಳ ಸಭೆಯನ್ನು ಕರೆಯುವಂತೆ ಕರ್ನಾಟಕ ರಾಜ್ಯ ವಿಕಲಚೇತನರ ಆರ್ ಪಿಡಿ ಟಾಸ್ಕ್ ಫೋರ್ಸ್ ಒಕ್ಕೂಟದಿಂದ ತಹಶೀಲ್ದಾರ್ ಗೆ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು.

ರಾಜ್ಯ ಸರ್ಕಾರವು ವಿಕಲಚೇತನರ ಸಬಲೀಕರಣಕ್ಕಾಗಿ ಇತ್ತೀಚಿನ ದಿನಗಳಲ್ಲಿ ಅನೇಕ ಮಹತ್ವದ ಸುತ್ತೋಲೆಗಳನ್ನು ಜಾರಿಗೊಳಿಸಿದೆ. ಆದರೆ, ಈ ಸುತ್ತೋಲೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಲ್ಲಿ ಕೆಳ ಹಂತದ ಅಧಿಕಾರಿಗಳು ಸಂಪೂರ್ಣವಾಗಿ ವಿಫಲರಾಗಿದ್ದಾರೆ ಎಂಬ ಗಂಭೀರ ಆರೋಪ ಕೇಳಿ ಬಂದಿದೆ. ಇದರಿಂದಾಗಿ ವಿಕಲಚೇತನರು ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಸಾಧ್ಯವಾಗದೇ, ಅವರ ಸಮಸ್ಯೆಗಳು ಹಾಗೆಯೇ ಉಳಿದುಕೊಂಡಿವೆ.

ತಾಲೂಕು ಅಧ್ಯಕ್ಷತೆಯಲ್ಲಿ ಕುಂದು ಕೊರತೆಗಳ ಸಭೆಯನ್ನು ಆಯೋಜಿಸಲು ಹಲವಾರು ಬಾರಿ ಆಡಳಿತದ ಕಾರ್ಯಾಲಯಕ್ಕೆ ಮನವಿಯನ್ನು ಸಲ್ಲಿಸಲಾಗಿದೆ. "ಹಲವಾರು ಮನವಿಗಳ ಹೊರತಾಗಿಯೂ, ಈವರೆಗೆ ಯಾವುದೇ ಸಭೆಯನ್ನು ಹಮ್ಮಿಕೊಂಡಿಲ್ಲ. ಇದರಿಂದ ನಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ವೇದಿಕೆಯೇ ಸಿಕ್ಕಿಲ್ಲ," ಎಂದು ವಿಕಲಚೇತನರ ಪರವಾಗಿ ಮನವಿ ಸಲ್ಲಿಸಿದವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಾಲೂಕು ಆಡಳಿತವು ಈ ವಿಷಯದ ತುರ್ತನ್ನು ಅರಿತು ಆದಷ್ಟು ಶೀಘ್ರದಲ್ಲಿ ವಿಕಲಚೇತನರ ಕುಂದು ಕೊರತೆಗಳ ಸಭೆಯನ್ನು ಹಮ್ಮಿಕೊಳ್ಳಬೇಕು ಎಂದು ಮನವಿದಾರರು ಒತ್ತಾಯಿಸಿದ್ದಾರೆ."ಸಭೆ ಕರೆಯುವಲ್ಲಿ ವಿಳಂಭವಾದಲ್ಲಿ, ವಿಕಲಚೇ ತನರ ಹಕ್ಕುಗಳನ್ನು ಮತ್ತು ಸಮಸ್ಯೆಗಳನ್ನು ಎತ್ತಿ ಹಿಡಿಯಲು ತಮ್ಮ ಕಾರ್ಯಾಲಯದ ಮುಂದೆ ಧರಣಿಯನ್ನು ಹಮ್ಮಿಕೊಳ್ಳಲಾಗುವುದು," ಎಂದು ಅವರು ಆಡಳಿತಕ್ಕೆ ತೀವ್ರ ಎಚ್ಚರಿಕೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಮೊಹಮ್ಮದ್ ಜಾಫರ್, ತಾಲೂಕ ಅಧ್ಯಕ್ಷ ಹನುಮೇಶ ಕಾತರಕಿ, ವೆಂಕಟೇಶ ನಾಯಕ, ನರಸಪ್ಪ ಕಾತರಕಿ, ಬಂದೇನವಾಜ್ ಇದ್ದರು.

# ನಿವೃತ್ತ ಅಂಗನವಾಡಿ ಕಾರ್ಯಕರ್ತೆಯರಿಗೆ ಗ್ರಾಚ್ಯುಟಿ: ಲಿಂಗಸಗೂರಿನಲ್ಲಿ ಪ್ರತಿಭಟನೆ




ಯುವ ಮಾರ್ಗ ಸುದ್ದಿ

**ಲಿಂಗಸಗೂರು,ಅ.29–**2011 ರಿಂದ 2023ರ ಮಾರ್ಚ್‌ವರೆಗೆ ನಿವೃತ್ತಿಯಾದ ಎಲ್ಲ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ಸುಪ್ರೀಂ ಕೋರ್ಟ್ ಆದೇಶದಂತೆ 1972ರ ಗ್ರಾಚ್ಯುಟಿ ಮೊತ್ತವನ್ನು ಬಿಡುಗಡೆ ಮಾಡುವಂತೆ ಒತ್ತಾಯಿಸಿ, ಸಿಐಟಿಯು ಸಂಯೋಜಿತ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ನೇತೃತ್ವದಲ್ಲಿ ಬುಧವಾರ ಸಿಡಿಪಿಓ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು. ಪ್ರತಿಭಟನೆಯ ಬಳಿಕ ಸಿಡಿಪಿಓ ನಾಗರತ್ನ ನಾಯಕ್ ಅವರಿಗೆ ಮನವಿ ಸಲ್ಲಿಸಲಾಯಿತು.

1975ರ ಅಕ್ಟೋಬರ್ 2ರಂದು ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ICDS) ಒಂದು ಶಿಶುವಿನಂತೆ ಆರಂಭಗೊಂಡು, ಇಂದು ಹೆಮ್ಮರವಾಗಿ ಬೆಳೆದಿದ್ದು, ರಾಜ್ಯದಲ್ಲಿ ಸುಮಾರು 50 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳನ್ನು ಹೊಂದಿದೆ. ಮಾತ್ರವಲ್ಲದೆ, ಇದು ಮಾನವ ಸಂಪನ್ಮೂಲಗಳ ಬೆಳವಣಿಗೆಯನ್ನು ಖಾತ್ರಿಪಡಿಸುವ ಯೋಜನೆಯಾಗಿ ಬೆಳೆದಿದೆ. ಇಂತಹ ಮಹತ್ವದ ಯೋಜನೆಯ ಅಭಿವೃದ್ಧಿಗೆ ಕೇವಲ ರೂ. 150–75 ರಿಂದ ಹಿಡಿದು ಸಾವಿರಾರು ಜನ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ದುಡಿದಿದ್ದಾರೆ. ಆದರೆ, ವರ್ಷಗಳ ಸೇವೆಯ ನಂತರ ನಿವೃತ್ತರಾದವರ ಬದುಕು ಇಂದು ಅತಂತ್ರವಾಗಿದೆ ಎಂದು ಪ್ರತಿಭಟನಾಕಾರರು ತಮ್ಮ ನೋವನ್ನು ವ್ಯಕ್ತಪಡಿಸಿದರು.

2022ರ ಏಪ್ರಿಲ್ 25ರಂದು ಸುಪ್ರೀಂ ಕೋರ್ಟ್ ನೀಡಿದ ತೀರ್ಪಿನನ್ವಯ (Civil Appeal No(s) 3153/ 2022 SLP (Civil) No 30193/2017) ಅಂಗನವಾಡಿ ಕೇಂದ್ರಗಳಲ್ಲಿ ಕೆಲಸ ಮಾಡುವ ಎಲ್ಲ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ 1972ರ ಗ್ರಾಚ್ಯುಟಿ ಕಾಯ್ದೆಯ ನಿಬರ್ಂಧನೆಗಳು ಅನ್ವಯವಾಗುತ್ತದೆ ಎಂದು ಸ್ಪಷ್ಟಪಡಿಸಲಾಗಿದೆ. ಈ ತೀರ್ಪನ್ನು ಕರ್ನಾಟಕದಲ್ಲಿ ಜಾರಿ ಮಾಡಬೇಕು ಎಂದು ಒತ್ತಾಯಿಸಿ 2023ರ ಜನವರಿಯಲ್ಲಿ ಸುದೀರ್ಘ ಚಳುವಳಿ ನಡೆಸಲಾಯಿತು. ಇದರ ಪರಿಣಾಮವಾಗಿ, 02–02–2023ರಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ 2023ರ ಏಪ್ರಿಲ್‌ನಿಂದ ಗ್ರಾಚ್ಯುಟಿಯನ್ನು ಜಾರಿ ಮಾಡಿದೆ. ಆದರೆ, ಈ ಆದೇಶವನ್ನು ಕೇವಲ 2023ರ ನಂತರ ನಿವೃತ್ತರಾದವರಿಗೆ ಮಾತ್ರವಲ್ಲದೆ, 2011 ರಿಂದ 2023ರ ಮಾರ್ಚ್ ತನಕ ನಿವೃತ್ತಿಯಾದ 10,311 ಅಂಗನವಾಡಿ ಕಾರ್ಯಕರ್ತೆಯರು ಮತ್ತು 11,980 ಅಂಗನವಾಡಿ ಸಹಾಯಕಿಯರಿಗೂ ಅನ್ವಯಿಸಬೇಕು ಎಂದು ಪ್ರತಿಭಟನಾಕಾರರು ಈ ಸಂದರ್ಭದಲ್ಲಿ ಆಗ್ರಹಿಸಿದರು.

ತಾಲೂಕಾಧ್ಯಕ್ಷೆ ಸರಸ್ವತಿ ಈಚನಾಳ ಅವರು ಮಾತನಾಡಿ, ನಿವೃತ್ತ ನೌಕರರ ಗ್ರಾಚ್ಯುಟಿ ಮೊತ್ತಕ್ಕಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ, ಸುಮಾರು ? 183 ಕೋಟಿ ಅನುದಾನ ಬಿಡುಗಡೆಗಾಗಿ ಹಣಕಾಸು ಇಲಾಖೆಗೆ ಕಳುಹಿಸಲಾಗಿದೆ. ಆದರೆ, ಹಣಕಾಸು ಇಲಾಖೆ ಈ ಅನುದಾನವನ್ನು ಬಿಡುಗಡೆ ಮಾಡದೇ ವಿಳಂಬ ಮಾಡುತ್ತಿದೆ. ಆದ್ದರಿಂದ, ಕೂಡಲೇ ಈ ಅನುದಾನವನ್ನು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಿಐಟಿಯು ಜಿಲ್ಲಾ ಜಂಟಿ ಕಾರ್ಯದರ್ಶಿ ರಮೇಶ ವೀರಾಪೂರು, ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ತಾಲೂಕು ಅಧ್ಯಕ್ಷೆ ಸರಸ್ವತಿ ಬಿ ಈಚನಾಳ, ಕಾರ್ಯದರ್ಶಿ ಮಹೇಶ್ವರಿ, ಮುಖಂಡರಾದ ಲಕ್ಷ್ಮೀ ನಗನೂರ, ಬಸಮ್ಮ ಬಯ್ಯಾಪೂರ, ನಿವೃತ್ತ ಅಂಗನವಾಡಿ ಕಾರ್ಯಕರ್ತೆ ಸಂಘದ ಮುಖಂಡರಾದ ಮಲ್ಲಮ್ಮ ಹೊನ್ನಳ್ಳಿ, ಅನುಸುಯಾ ಪಾಟೀಲ್, ಮಲ್ಲನಗೌಡ, ಸಂಗಯ್ಯಸ್ವಾಮಿ, ಮಹಾಂತೇಶ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರಾಯಚೂರು ಜಿಲ್ಲೆಯಲ್ಲಿ ಹತ್ತಿ ಖರೀದಿ ಪ್ರಕ್ರಿಯೆ ಆರಂಭ: ಸದುಪಯೋಗಕ್ಕೆ ಸಲಹೆ

ಯುವ ಮಾರ್ಗ ಸುದ್ದಿ




**ರಾಯಚೂರು,ಅ.29–** 2025–26ನೇ ಸಾಲಿನಲ್ಲಿ, ರಾಜ್ಯದ ಹತ್ತಿ ಬೆಳೆಗಾರರಿಂದ ಭಾರತೀಯ ಹತ್ತಿ ನಿಗಮ ನಿಯಮಿತ (ಸಿಸಿಐ) ವತಿಯಿಂದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ. ಕ್ಯೂ ಗುಣಮಟ್ಟದ ಹತ್ತಿ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ಎಫ್.ಎ.ಕ್ಯೂ ಗುಣಮಟ್ಟದ ಹತ್ತಿಯ ಬೆಂಬಲ ಬೆಲೆಯು ಮಧ್ಯಮ ಎಳೆಗೆ ಪ್ರತಿ ಕ್ವಿಂಟಲ್‌ಗೆ 7,710 ರೂ ಮತ್ತು ಉದ್ದನೆಯ ಎಳೆಗೆ ಪ್ರತಿ ಕ್ವಿಂಟಲ್ ಗೆ 8,110 ರೂ ನಿಗದಿಪಡಿಸಲಾಗಿದೆ. ಈಗಾಗಲೇ ನೋಂದಣಿ ಪ್ರಾರಂಭವಾಗಿದ್ದು, ಹತ್ತಿ ಬೆಳೆಯುವ ರೈತರ ಹಿತಾಸಕ್ತಿಯಿಂದ ಭಾರತೀಯ ಹತ್ತಿ ನಿಗಮ ನಿಯಮಿತ ಹೊರಡಿಸಿರುವ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಪ್ರಯೋಜನೆ ಪಡೆಯಲು ಜಿಲ್ಲೆಯ ಎಲ್ಲಾ ಹತ್ತಿ ಬೆಳೆಗಾರರು ಸಕಾಲದಲ್ಲಿ ಹೆಸರು ನೋಂದಾಯಿಸಿಕೊಳ್ಳುವಂತೆ ಕೋರಲಾಗಿದೆ.

ನೋಂದಣಿ ವಿಧಾನ: 2025–26ನೇ ಸಾಲಿನ ಬೆಂಬಲ ಬೆಲೆ ದರದಲ್ಲಿ ಹತ್ತಿಯನ್ನು (ಕಪಾಸ್) ಮಾರಾಟ ಮಾಡಲು ಗೂಗಲ್ ಪ್ಲೇ ಸ್ಟೋರ (Google Play Store) ಮತ್ತು ಅಪಲ್ ಐಓಎಸ್ (Apple iOS Store) ನಲ್ಲಿ ಲಭ್ಯವಿರುವ "ಕಪಾಸ್ ಕಿಸಾನ್" ಮೊಬೈಲ್ ಅಪ್ಲಿಕೇಶನ್ ಮೂಲಕ ಹೆಸರು ನೋಂದಾಯಿಸಿಕೊಳ್ಳಬೇಕು.

ನೋಂದಣಿ ಪ್ರಕ್ರಿಯೆಯ ಹಂತಗಳು: ಮೊದಲು ಭೂ ದಾಖಲೆಗಳು, ಕಂದಾಯ ಪ್ರಾಧಿಕಾರದಿಂದ ಪ್ರಮಾಣೀಕರಿಸಲ್ಪಟ್ಟ ಹತ್ತಿ ಬೆಳೆಯ ದಾಖಲೆಗಳು, ಆಧಾರ್ ಕಾರ್ಡ್ ಮತ್ತು ಫೋಟೊ ಹಾಗೂ ಎಫ್‌ಐಡಿ ಸಂಖ್ಯೆಯ ದಾಖಲೆ ಪುರಾವೆಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ಬಳಿಕ "ಕಪಾಸ್ ಕಿಸಾನ್" ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಳ್ಳಬೇಕು. ಬಳಿಕ ನಿರ್ದಿಷ್ಟ ಅವಧಿಯೊಳಗೆ ಸ್ವಯಂ ನೋಂದಣಿಯನ್ನು ಪೂರ್ಣಗೊಳಿಸಬೇಕು. ಈ ಬಗ್ಗೆ ಗೊಂದಲವಿದ್ದಲ್ಲಿ ಮೊಬೈಲ್ ಸಂಖ್ಯೆ 9611093318, 9449906537, 9632708161, 9513240295, 8861345225, 6362506431, 7619321419ಗೆ ಕರೆ ಮಾಡಿ ವಿಚಾರಿಸಬಹುದಾಗಿದೆ ಎಂದು ಜಿಲ್ಲಾ ಟಾಸ್ಕ್ ಫೋರ್ಸ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಳಂದ: ಸಿಬ್ಬಂದಿಗಳಿಲ್ಲದೆ ತಾ.ಪಂ.ಕಚೇರಿ ಬಣಬಣ !



**ಆಳಂದ,ಅ.29–**ಇಲ್ಲಿನ ತಾಲೂಕು ಪಂಚಾಯಿತಿ ಕಚೇರಿಯು ಮಂಗಳವಾರ ಬೆಳಿಗ್ಗೆ 11 ಗಂಟೆಯಾದರೂ ಸಿಬ್ಬಂದಿಗಳಿಲ್ಲದೆ ಬಿಕೋ ಎನ್ನುತಲಿತ್ತು.

ಕಚೇರಿಯೊಳಗೆ ಕೇವಲ ಇಬ್ಬರು ಕ್ಲರ್ಕಗಳು ಕಾರ್ಯನಿರ್ವಹಿಸುತ್ತಿದ್ದರೆ, ಇತರ ಅಧಿಕಾರಿಗಳು ಯಾರೂ ಹಾಜರಿರಲಿಲ್ಲ. ಕಚೇರಿಯೊಳಗೆ ನಿಷ್ಕ್ರಿಯತೆ ಮತ್ತು ನಿರ್ಲಕ್ಷ್ಯ ಆವರಿಸಿಕೊಂಡಿದ್ದು, ಜನಸಾಮಾನ್ಯರ ಕೆಲಸಗಳು ನಿಂತು ಹೋಗುವ ಪರಿಸ್ಥಿತಿ ಉಂಟಾಗಿದೆ. ತಾಲೂಕಿನ ವಿವಿಧ ಶಾಖೆಗಳಲ್ಲಿಯೂ ಇದೇ ದೃಶ್ಯ ಕಂಡುಬರುತ್ತಿದ್ದು, ಅಧಿಕಾರಿಗಳ ಲಗಾಮಿಲ್ಲದ ಆಡಳಿತಕ್ಕೆ ಇದು ಸಾಕ್ಷಿಯಾಗಿದೆ. ಕೆಲವರು ಕಚೇರಿಗೆ ಹಾಜರಾದರೂ ಕೇವಲ ಕಾಟಾಚಾರಕ್ಕಾಗಿ ಬಂದು ತೆರಳುವಂತಾಗಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ಕೆಲಸಕ್ಕೆ ಕರೆಯಬೇಡಿ, ಊಟಕ್ಕೆ ಮರೆಯಬೇಡಿ" ಎಂಬ ನಾಣುನುಡಿಯಂತೆ, ಅಧಿಕಾರಿಗಳು ಸಂಬಳಕ್ಕಾಗಿ ಮಾತ್ರ ಕಚೇರಿಯ ಹೆಸರು ಉಳಿಸಿಕೊಂಡಿರುವಂತಾಗಿದೆ. ಕರ್ತವ್ಯ ನಿರ್ವಹಣೆಯಲ್ಲಿ ಗಂಭೀರ ಶಿಸ್ತಿನ ಕೊರತೆ ಗೋಚರಿಸುತ್ತಿದ್ದು, ಇದರಿಂದ ಸಾರ್ವಜನಿಕರ ಕೆಲಸಗಳಿಗೆ ತೊಂದರೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಮೇಲಾಧಿಕಾರಿಗಳು ಮತ್ತು ಜನಪ್ರತಿನಿಧಿಗಳು ತಕ್ಷಣ ಕ್ರಮ ಕೈಗೊಂಡು ಕರ್ತವ್ಯಲೋಪ ತೋರಿಸುವ ಅಧಿಕಾರಿಗಳಿಗೆ ತಕ್ಕ ಪಾಠ ಕಲಿಸುವುದು ಅಗತ್ಯ ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಈ ಕುರಿತು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾನಪ್ಪ ಕಟ್ಟಿಮನಿ ಅವರು ಪ್ರತಿಕ್ರಿಯೆ ನೀಡುತ್ತ "ನಾನು ಗಣತಿ ಕರ್ತವ್ಯಕ್ಕಾಗಿ ಹೊರಗಡೆ ಇದ್ದೆ. ಕಚೇರಿಯಲ್ಲಿ ಸಿಬ್ಬಂದಿಗಳು ಇಲ್ಲದಿರುವುದು ಗಮನಕ್ಕೆ ಬಂದಿದೆ. ಈ ಕುರಿತು ಶೀಘ್ರದಲ್ಲೇ ನೋಟಿಸ್ ಜಾರಿ ಮಾಡಲಾಗುವುದು," ಎಂದು ಸ್ಪಷ್ಟಪಡಿಸಿದರು.

# ಪ್ರತಿಯೊಬ್ಬರ ರಕ್ತದಾನದಿಂದ ಮೂರು ಜನರ ಪ್ರಾಣ ಉಳಿಸಲು ಸಾಧ್ಯ : ರವೀಂದ್ರ ಶಾಬಾದಿ



**ಜೇವರ್ಗಿ,ಅ.29–** ಬಾಣಂತಿಯರಿಗೆ ಮತ್ತು ಅಕಾಲಿಕವಾಗಿ ಸಂಭವಿಸುವ ಅಪಘಾತಕ್ಕೆ ಒಳಗಾದವರಿಗೆ ತುರ್ತು ಚಿಕಿತ್ಸೆಗೆ ರಕ್ತದ ಅವಶ್ಯಕತೆ ಬಹಳ ಇರುತ್ತದೆ ಹೀಗಾಗಿ ರಕ್ತದಾನ ಮಹಾದಾನ ಮತ್ತು ಶ್ರೇಷ್ಠ ದಾನಗಳಲ್ಲಿ ಒಂದಾಗಿದ್ದು, ಒಬ್ಬ ವ್ಯಕ್ತಿ ರಕ್ತದಾನ ಮಾಡುವದರಿಂದ ಮೂರು ಜನರ ಪ್ರಾಣ ಉಳಿಸಬಹುದು ಎಂದು ಕಲಬುರಗಿ ಜಿಲ್ಲಾ ಶಾಖೆಯ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಗೌರವ ಕಾರ್ಯದರ್ಶಿ ರವೀಂದ್ರ ಶಾಬಾದಿ ಹೇಳಿದರು.

ಅವರು ಜೇವರ್ಗಿ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಲಬುರಗಿ ಜಿಲ್ಲಾ ಶಾಖೆಯ ಭಾರತೀಯ ರೆಡ್ ಕ್ರಾಸ್, ಕಾಲೇಜಿನ ಆಂತರಿಕ ಗುಣಮಟ್ಟದ ಭರವಸೆ ಕೋಶ ಹಾಗೂ ಯುವ ರೆಡ್ ಕ್ರಾಸ್ ಘಟಕದ ಸಹಯೋಗದಲ್ಲಿ ಹಮ್ಮಿಕೊಂಡ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ವೇದಿಕೆಯ ಮೇಲೆ ಉಪಸ್ಥಿತರಿದ್ದ ಕಲಬುರಗಿ ಜಿಲ್ಲಾ ಶಾಖೆಯ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ರಕ್ತದಾನ ಉಪಸಮಿತಿಯ ಸಂಚಾಲಕರಾದ ಡಾ. ಸಯ್ಯದ್ ಸನಾವುಲ್ಲ ಮಾತನಾಡಿ, ಮನುಷ್ಯ ಯಾವಾಗಲೂ ಉದ್ವೇಗಕ್ಕೆ ಒಳಗಾಗಬಾರದು. ಇದರಿಂದ ಆರೋಗ್ಯದಲ್ಲಿ ಏರುಪೇರಾಗುತ್ತದೆ. ಉತ್ತಮ ಆರೋಗ್ಯ ಕಾಪಾಡಿಕೊಂಡು, ಮೊಬೈಲ್ನಿಂದ ದೂರವಿರಬೇಕೆಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ. ಶಾಂತಾ ಅಸ್ಟಿಗೆ ಮಾತನಾಡಿ, ರೆಡ್ ಕ್ರಾಸ್ ಒಂದು ಉತ್ತಮ ಸೇವಾ ಸಂಸ್ಥೆಯಾಗಿದೆ. ವಿದ್ಯಾರ್ಥಿಗಳು ಸೇವಾ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಒಂದು ವರ್ಷದಲ್ಲಿ ಪುರುಷರು ನಾಲ್ಕು ಸಲ ಮಹಿಳೆಯರು ಮೂರು ಸಲ ರಕ್ತದಾನ ಮಾಡಬಹುದು. ರಕ್ತದಾನಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಧೈರ್ಯದಿಂದಿರಬೇಕೆಂದು ತಿಳಿಸಿದರು.

ವೇದಿಕೆಯ ಮೇಲೆ ಜಿಮ್ಸ್ ಆಸ್ಪತ್ರೆಯ ಡಾ. ಜಗದೀಶ ಕಟ್ಟಿಮನಿ, ಐಕ್ಯೂಎಸಿ ಸಂಯೋಜಕ ಡಾ. ಸಂದೀಪ್ ತಿವಾರಿ, ಸಿಬ್ಬಂದಿ ಕಾರ್ಯದರ್ಶಿ ಡಾ. ಶರಣಪ್ಪ ಸೈದಾಪೂರ ಉಪಸ್ಥಿತರಿದ್ದರು.

ಯುವ ರೆಡ್ ಕ್ರಾಸ್ ಘಟಕದ ಸಂಚಾಲಕಿ ಡಾ. ಖಿತೇಜಾ ನಸ್ರಿನ್ ಸ್ವಾಗತಿಸಿದರು. ಎನ್ ಎಸ್ಸೆಸ್ ಸಂಚಾಲಕ ಡಾ. ಶರಣಪ್ಪ ಗುಂಡಗುರ್ತಿ ಪ್ರಾಸ್ತಾವಿಕ ನುಡಿದರು. ಕನ್ನಡ ಅಧ್ಯಾಪಕ ಭೀಮಣ್ಣ ನಿರೂಪಿದರು. ಹಿಂದಿ ವಿಭಾಗದ ಮುಖ್ಯಸ್ಥ ಕುಪೇಂದ್ರ ವಂದಿಸಿದರು. ರಕ್ತದಾನ ಶಿಬಿರದಲ್ಲಿ ಅಧ್ಯಾಪಕರು ಸೇರಿ 38 ಜನರು ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಬೋದಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಬೋಂಗಾ ಮುಚ್ಚಲು ಒತ್ತಾಯ

ಯುವ ಮಾರ್ಗ ಸುದ್ದಿ



**ಅರಕೇರಾ,ಅ.29–** ತಾಲೂಕಿನ ಬಿ.ಗಣೇಕಲ್–ಪಂದ್ಯಾನ ಗ್ರಾಮದ ಮಾರ್ಗ ಮಧ್ಯದ ಸೇತುವೆ ಬಳಿ ರಸ್ತೆಯಲ್ಲಿ ಬೋಂಗಾ ಬಿದ್ದಿದ್ದು ಅಪಾಯಕ್ಕೆ ಕಾದಿದೆ. ವಾಹನಗಳ ಸಂಚಾರ ಹಾಗೂ ಮಳೆ ನೀರು ಹರಿದು ಬೋಂಗಾ ಮತ್ತಷ್ಟು ದೊಡ್ಡದಾಗುತ್ತಿದ್ದು, ಸೇತುವೆ ಬಳಿ ಸಂಪೂರ್ಣ ರಸ್ತೆ ಕುಸಿಯುವ ಸಾಧ್ಯತೆ ಇದೆ.

ಬಿ.ಗಣೇಕಲ್ ಮೂಲಕ ಪಂದ್ಯಾನ, ಸಮುದ್ರ, ಎಚ್.ಎನ್ ತಾಂಡದಿಂದ ದೇವದುರ್ಗಕ್ಕೆ ಸಂಪರ್ಕಿಸುವ ಪ್ರಮುಖ ರಸ್ತೆ ಇದಾಗಿದ್ದು, ಅಧಿಕ ವಾಹನಗಳು ಸಂಚರಿಸುತ್ತವೆ. ರಾತ್ರಿ ವೇಳೆ ಬೋಂಗಾ ಕಾಣದೆ ಅಪಘಾತಗಳು ಸಂಭವಿಸುವ ಸಾಧ್ಯತೆ ಇದೆ. ಕೆಲವು ದಿನಗಳಿಂದ ಸಂಬಂಧಿಸಿದ ಅಧಿಕಾರಿಗಳು ಬೋಂಗಾ ದುರಸ್ತಿಗೆ ಮುಂದಾಗಿಲ್ಲ. ಅನಾಹುತ ಸಂಭವಿಸುವ ಮುನ್ನ ಸಂಬಂಧಿಸಿದ ಅಧಿಕಾರಿಗಳು ದುರಸ್ತಿಗೊಳಿಸುಂತೆ ಬಿ.ಗಣೇಕಲ್,ಪಂದ್ಯಾನ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H